# ಗೃಹರಕ್ಷಕ ಹಾಗೂ ಪೌರರಕ್ಷಣಾ ಇಲಾಖೆ, ಬೆಂಗಳೂರು

## ಅಧಿಸೂಚನೆ ಸಂಖ್ಯೆ: 77/ನೇಮಕಾತಿ–/2018–19,

**ವಿಷಯ: ಬೋಧಕ ಹಾಗೂ ಸಹಾಯಕ ಬೋಧಕ (INSTRUCTOR AND ASSISTANT INSTRUCTOR) ಹುದ್ದೆಗಳ ನೇರ ನೇಮಕಾತಿ–2018 ಕುರಿತು.**

~ ~ ~ ~

1) ಕರ್ನಾಟಕ ರಾಜ್ಯದ, **ಗೃಹರಕ್ಷಕ ಹಾಗೂ ಪೌರರಕ್ಷಣಾ** ಇಲಾಖೆಯಲ್ಲಿ ಖಾಲಿ ಇರುವ **ಬೋಧಕ ಹಾಗೂ ಸಹಾಯಕ ಬೋಧಕ** (INSTRUCTOR AND ASSISTANT INSTRUCTOR) **ಹುದ್ದೆಗಳ ನೇರ** ನೇಮಕಾತಿಗಾಗಿ ಈ ಕೆಳಕಾಣಿಸಿದ ನಿಯಮಗಳಿಗೆ ಕಾಲಕಾಲಕ್ಕೆ ಆಗುವ ತಿದ್ದುಪಡಿಗಳ ಅನುಸಾರ ಈ ಅಧಿಸೂಚನೆಯನ್ನು ಪ್ರಕಟಿಸುತ್ತ ಅರ್ಹ ಅಭ್ಯರ್ಥಿಗಳಿಂದ ಆನ್–ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

- ಗೃಹರಕ್ಷಕ ಹಾಗೂ ಪೌರರಕ್ಷಣಾ ಇಲಾಖೆಯ (ವೃಂದ ಮತ್ತು ನೇಮಕಾತಿ) ನಿಯಮಗಳು, 2010 ರ ಅಧಿಸೂಚನೆ ಸಂಖ್ಯೆ: ಹೆಚ್‌ಡಿ 114 ಎಸ್‌ಹೆಚ್‌ಜಿ 2007 (ಪಿ), ಬೆಂಗಳೂರು ದಿನಾಂಕ 27–05–2011
- ಗೃಹರಕ್ಷಕ ಹಾಗೂ ಪೌರರಕ್ಷಣಾ ಇಲಾಖೆಯ (ನೇಮಕಾತಿ) (ತಿದ್ದುಪಡಿ) ನಿಯಮಗಳು, 2013 ರ ಅಧಿಸೂಚನೆ ಸಂಖ್ಯೆ: ಹೆಚ್‌ಡಿ 28 ಎಸ್‌ಹೆಚ್‌ಜಿ 2012, ಬೆಂಗಳೂರು, ದಿನಾಂಕ 26–06–2013.
- ನೇರ ನೇಮಕಾತಿಗೆ ಅನುಮತಿ ನೀಡಿರುವ ಸರ್ಕಾರಿ ಆದೇಶ ಸಂಖ್ಯೆ ಒಇ 113 ಕಗ್ರಸೇ 2015 ಬೆಂಗಳೂರು ದಿನಾಂಕ:10–02–2015 ಮತ್ತು ಒಇ 72 ಕಗ್ರಸೇ 2015, ಬೆಂಗಳೂರು ದಿನಾಂಕ: 17–10–2017.
- ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013.
- ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು, 2013.
- ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ)ನಿಯಮಗಳು 1977.

**ಅರ್ಜಿಗಳನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್** www.ksp.gov.in or www.karnataka.gov.in / hgcd **ಗೆ ಆನ್–ಲೈನ್ (On-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.**

**ವಿಶೇಷ ಸೂಚನೆ : –**

**2) ಹೈದರಾಬಾದ್–ಕರ್ನಾಟಕ ಮೀಸಲಾತಿ ಕೋರುವ ಅಭ್ಯರ್ಥಿಗಳಿಗೆ ಸೂಚನೆ.**

2.1) ಭಾರತ ಸಂವಿಧಾನದ ಅನುಚ್ಛೇದ 371(ಜೆ) ಅನುಷ್ಠಾನಕ್ಕೆ ಸಂಬಂಧಿಸಿದಂತೆ, ಹೊರಡಿಸಲಾದ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013 ಹಾಗೂ ಸದರಿ ಆದೇಶಕ್ಕೆ ಸಂಬಂಧಿಸಿದಂತೆ ಹೊರಡಿಸಲಾದ ತಿದ್ದುಪಡಿಯಂತೆ ಮೀಸಲಾತಿಗೆಂದು ಗುರುತಿಸಿ, ಸ್ಥಳೀಯ ವೃಂದಕ್ಕೆ ಒಳಪಡುವ ಹುದ್ದೆಗಳನ್ನು ಪ್ರತ್ಯೇಕವಾಗಿ ನೀಡಲಾಗಿರುತ್ತದೆ. ಸ್ಥಳೀಯ ವೃಂದದ ಹುದ್ದೆಗಳನ್ನು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013ರ ಕಂಡಿಕೆ 2(1)(ಎಫ್) ಅರ್ಥ ವಿವರಣೆಯ ಅಡಿಯಲ್ಲಿ ವರ್ಗೀಕರಿಸಲು ಅರ್ಹವಿರುವ ಅಭ್ಯರ್ಥಿಗಳಿಂದ ಮಾತ್ರ ತುಂಬಲಾಗುವುದು. ಈ ಹಿನ್ನೆಲೆಯಲ್ಲಿ, ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಸಾರ್ವಜನಿಕ ಉದ್ಯೋಗ ಆದೇಶದಂತೆ ಅರ್ಹ ಸ್ಥಳೀಯ ವ್ಯಕ್ತಿಗಳು ಮಾತ್ರ ಅರ್ಹರಿರುತ್ತಾರೆ. ಪರಂತು, ಮಿಕ್ಕುಳಿದ ವೃಂದದಲ್ಲಿ ಲಭ್ಯವಿರುವ ಖಾಲಿ ಹುದ್ದೆಗಳಿಗೆ ಇತರರೊಂದಿಗೆ ಸ್ಥಳೀಯ ವ್ಯಕ್ತಿಗಳು ಸಹ ಅರ್ಜಿ ಸಲ್ಲಿಸುವ ಅವಕಾಶ ಕಲ್ಪಿಸಲಾಗಿರುತ್ತದೆ

2.2) ಹೈದರಾಬಾದ್–ಕರ್ನಾಟಕ ಮೀಸಲಾತಿ ಹೊಂದಿರದ ಅಭ್ಯರ್ಥಿಗಳು ಹೈದರಾಬಾದ್–ಕರ್ನಾಟಕ ಮೀಸಲಾತಿಯಡಿ ಮೀಸಲಿರಿಸಲಾಗಿರುವ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಿಲ್ಲ. ಆದ್ದರಿಂದ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಮೇಲ್ಕಂಡ ವಿಷಯಗಳನ್ನು ಗಮನದಲ್ಲಿಟ್ಟುಕೊಂಡು ಅರ್ಜಿ ಸಲ್ಲಿಸಬೇಕಾಗಿರುತ್ತದೆ

.

2.3) ಅಭ್ಯರ್ಥಿಯು ಅರ್ಜಿ ಸಲ್ಲಿಸಿದ ನಂತರ ಯಾವುದೇ ಹಂತದಲ್ಲಿಯೂ, ಅರ್ಜಿಯಲ್ಲಿ ಕೋರಿರುವ ಮೀಸಲಾತಿಗಳ ಬದಲಾವಣೆಗೆ ಅವಕಾಶವಿರುವುದಿಲ್ಲ.

2.4) ಅಭ್ಯರ್ಥಿಯು, ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ/ಅಂಶಗಳು / ಮೀಸಲಾತಿಗಳನ್ನು ಆಧರಿಸಿ ನೇಮಕಾತಿ ಪ್ರಕ್ರಿಯೆಗೆ ಅವಕಾಶ ಕಲ್ಪಿಸಿರುವುದರಿಂದ ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಯಾವುದೇ ಮೀಸಲಾತಿ ಬದಲಾವಣೆ ಕೋರಿ ಸಲ್ಲಿಸುವ ಮನವಿಯನ್ನು ಪರಿಗಣಿಸಲಾಗುವುದಿಲ್ಲ.

**3) ಶುಲ್ಕ:**

| | |
|---|---|
| ಸಾಮಾನ್ಯವರ್ಗ, ಪ್ರವರ್ಗ– 2(ಎ), 2(ಬಿ), 3(ಎ), 3(ಬಿ)ಗೆ ಸೇರಿದ ಅಭ್ಯರ್ಥಿಗಳಿಗೆ | ರೂ. 250/– |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳಿಗೆ | ರೂ. 100/– |

**ಎ. ಆನ್–ಲೈನ್ (On-line) ಮುಖಾಂತರ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ವಿಧಾನ:**

ಅರ್ಜಿದಾರ ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿ ನೀಡಲಾಗಿರುವ ಮಾಹಿತಿಸೂಚಿ / ಸೂಚನೆಗಳನ್ನು ಜಾಗರೂಕತೆಯಿಂದ ಓದಿಕೊಂಡು ಭರ್ತಿ ಮಾಡಬೇಕು. ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿನ Current Recruitment ನಲ್ಲಿ ನೀಡಲಾಗಿರುವ ಸೂಚನೆಗಳನ್ನು ಓದಿಕೊಂಡು ಯಾವುದೇ ತಪ್ಪು ಮಾಹಿತಿಯನ್ನು ನೀಡದೇ ಆನ್–ಲೈನ್‌ನಲ್ಲಿ ಲಭ್ಯವಿರುವ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹವರ ವಿರುದ್ಧ ಕಾನೂನಿನನ್ವಯ ನೇಮಕಾತಿ ಸಮಿತಿಯು ಸೂಕ್ತ ಕ್ರಮ ಕೈಗೊಳ್ಳುವುದು. ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅರ್ಜಿದಾರ ಒಂದು ಬಿಳಿ ಹಾಳೆಯ ಮೇಲೆ ಪಾಸ್‌ಪೋರ್ಟ್ ಅಳತೆಯ ಬಣ್ಣದ ಭಾವಚಿತ್ರ, ಸಹಿ ಮತ್ತು ಅಧಿಸೂಚನೆಯ ಕ್ರಮ ಸಂಖ್ಯೆ 8(ಸಿ)ರಲ್ಲಿ ನಮೂದಿಸಲಾಗಿರುವ ಯಾವುದಾದರು ಗುರುತಿನ ಚೀಟಿಯನ್ನು ಪ್ರತ್ಯೇಕವಾಗಿ (Soft Copy – less than 250 KB) ಸ್ಕ್ಯಾನ್ ಮಾಡಿಟ್ಟುಕೊಂಡಿರಬೇಕು. ನಂತರ ಅರ್ಜಿದಾರನ ಹೆಸರು, ಜಾತಿ, ಪ್ರವರ್ಗ, ಮೀಸಲಾತಿಗಳ ವಿವರ, ಹುಟ್ಟಿದ ದಿನಾಂಕ, ವಿದ್ಯಾರ್ಹತೆ ಮತ್ತು ಇತ್ಯಾದಿ ವಿವರಗಳನ್ನು ಭರ್ತಿ ಮಾಡಿ ಕೊನೆಯದಾಗಿ ಸ್ಕ್ಯಾನ್ ಮಾಡಿಟ್ಟುಕೊಂಡಿರುವ ಭಾವಚಿತ್ರ, ಸಹಿ ಮತ್ತು ಗುರುತಿನ ಚೀಟಿಯನ್ನು ಕಂಪ್ಯೂಟರ್ ಮುಖೇನ ಅಪ್‌ಲೋಡ್ (Upload) ಮಾಡಬೇಕು. ಇಲ್ಲವಾದಲ್ಲಿ ಅಂತಹ ಅರ್ಜಿದಾರರು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಿ ಮುಂದುವರೆಯಲು ಸಾಧ್ಯವಾಗುವುದಿಲ್ಲ. ಅರ್ಜಿದಾರ ನೀಡಿರುವ ವಿವರಗಳು ಎಲ್ಲಾ ರೀತಿಯಿಂದಲೂ ಸಮರ್ಪಕವಾಗಿದ್ದಲ್ಲಿ ಮಾತ್ರ ಚಲನ್ ಮುದ್ರಿಸಬಹುದು. ಚಲನ್ ಮುದ್ರಿಸಲು ಜನರೇಟ್ ಚಲನ್ ಬಟನ್ ಮೇಲೆ ಕ್ಲಿಕ್ ಮಾಡಿದಾಗ ತ್ರಿಪ್ರತಿ (Triplicate) ಬ್ಯಾಂಕ್ ಚಲನ್ ಸೃಜನೆಯಾಗುತ್ತದೆ. ಆ ಚಲನ್‌ನಲ್ಲಿ ಅರ್ಜಿಯ ಸಂಖ್ಯೆಯೊಂದಿಗೆ, ನಿಮ್ಮ ಭಾವಚಿತ್ರ, ಪ್ರವರ್ಗ, ಮೀಸಲಾತಿಗಳ ವಿವರ ಮತ್ತು ಪಾವತಿಸಬೇಕಾಗಿರುವ ನಿಗದಿತ ಶುಲ್ಕಗಳ ವಿವರಗಳು ಇರುತ್ತವೆ. ಆ ಚಲನ್ ಪ್ರತಿಯನ್ನು ಮುದ್ರಿಸಿ / ಪ್ರಿಂಟ್ ಮಾಡಿಕೊಳ್ಳತಕ್ಕದ್ದು.

ನಂತರ ಅರ್ಜಿದಾರ ಮುದ್ರಿಸಿಕೊಳ್ಳಲಾದ ಚಲನ್‌ನಲ್ಲಿ ನಮೂದಾಗಿರುವ ಒಟ್ಟು ಶುಲ್ಕವನ್ನು ನಗದು ರೂಪದಲ್ಲಿ **ಸ್ಥಳೀಯ ಅಂಚೆ ಕಛೇರಿಗಳಲ್ಲಿ ಅಥವಾ ಹೆಚ್.ಡಿ.ಎಫ್.ಸಿ ಬ್ಯಾಂಕಿನ ಅಧಿಕೃತ ಶಾಖೆಗಳಲ್ಲಿ** ಪಾವತಿಸಿ ನಂತರ ಚಲನ್‌ನ 'ಅಭ್ಯರ್ಥಿ ಪ್ರತಿ'ಯನ್ನು ಇಟ್ಟುಕೊಂಡಿರತಕ್ಕದ್ದು ಅಥವಾ **ಹೆಚ್.ಡಿ.ಎಫ್.ಸಿ** ಯ IFSC code: **HDFC0003782** ಮತ್ತು Account No: **50200036340849** ನ್ನು ಉಪಯೋಗಿಸಿಕೊಂಡು ಆನ್–ಲೈನ್ ಮೂಲಕ ಶುಲ್ಕವನ್ನು ಪಾವತಿಸ ಬಹುದು.

ಅಭ್ಯರ್ಥಿಯು ಶುಲ್ಕ ಪಾವತಿಸಿದ ಎರಡು ದಿನಗಳ ನಂತರ ಪುನಃ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in or www.karnataka.gov.in / hgcd ನಲ್ಲಿ My Applicationನ್ನು ಕ್ಲಿಕ್ ಮಾಡಿ, ತಮ್ಮ ಅರ್ಜಿ ಸಂಖ್ಯೆ ಮತ್ತು ಜನ್ಮ ದಿನಾಂಕ ನಮೂದಿಸಿದ ನಂತರ ಅರ್ಜಿ ತೆರೆಯುತ್ತದೆ ಹಾಗೂ ಅಭ್ಯರ್ಥಿಯು ಭರ್ತಿ ಮಾಡಿರುವ ಎಲ್ಲಾ ವಿವರಗಳನ್ನು ಒಳಗೊಂಡಂತೆ ಅರ್ಜಿಯು ಸೃಜನೆಯಾಗುತ್ತದೆ, ಸದರಿ ಅರ್ಜಿಯ ಪ್ರತಿಯನ್ನು ಪ್ರಿಂಟ್ ಮಾಡಿಟ್ಟುಕೊಳ್ಳತಕ್ಕದ್ದು. ಅರ್ಜಿ ಪ್ರತಿ ಮತ್ತು ಅರ್ಜಿ ಸಂಖ್ಯೆಯು ಮುಂದಿನ ನೇಮಕಾತಿ ಪ್ರಕ್ರಿಯೆಯ ಎಲ್ಲಾ ಹಂತಗಳಿಗೆ ಅವಶ್ಯಕವಾಗಿರುತ್ತದೆ.

ಬಿ. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ನೇಮಕಾತಿ ಸಮಿತಿಯು ನಡೆಸುವ ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.

ಸಿ. ಪ್ರತಿಯೊಂದು ವೃಂದದ ಹುದ್ದೆಗೂ ಪ್ರತ್ಯೇಕ ಅರ್ಜಿ ಮತ್ತು ಪ್ರತ್ಯೇಕವಾಗಿ ಶುಲ್ಕವನ್ನು ಪಾವತಿಸತಕ್ಕದ್ದು.

| **ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಪ್ರಾರಂಭದ ದಿನಾಂಕ** | **ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ** | **ಶುಲ್ಕ ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ** |
|---|---|---|
| **28.01.2019** | **15.02.2019** | **18.02.2019** |

**ಟಿಪ್ಪಣಿ: ಡಿಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ**. ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: **18.02.2019** ರ ನಂತರ ಶುಲ್ಕವನ್ನು ಸಂದಾಯ ಮಾಡಲು ಅವಕಾಶವಿರುವುದಿಲ್ಲ.

**ಸೂಚನೆಗಳು:–**

4.1 ಗೃಹರಕ್ಷಕ ಹಾಗೂ ಪೌರರಕ್ಷಣಾ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in or www.karnataka.gov.in / hgcdನಲ್ಲಿ ನೀಡಲಾಗಿರುವ ಅರ್ಜಿಯನ್ನು ಭರ್ತಿ ಮಾಡಿ, ನಿಗದಿತ ದಿನಾಂಕದೊಳಗೆ ಸಲ್ಲಿಸಲಾಗುವ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು.

4.2 ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹವರ ವಿರುದ್ಧ ಕಾನೂನಿನನ್ವಯ ನೇಮಕಾತಿ ಸಮಿತಿಯು ಸೂಕ್ತ ಕ್ರಮ ಕೈಗೊಳ್ಳುವುದು.

4.3 ಆನ್–ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Help line) 25553234 / 22943346 ಅನ್ನು ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು. ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಎದುರಾದಲ್ಲಿ ಅದನ್ನು ಸ್ಥಗಿತಗೊಳಿಸಿ, ಮತ್ತೊಮ್ಮೆ ಅಧಿಕೃತ ವೆಬ್‌ಸೈಟ್‌ನಲ್ಲಿ ನೀಡಲಾಗಿರುವ ಅರ್ಜಿಯನ್ನು ಭರ್ತಿ ಮಾಡಬಹುದಾಗಿದೆ.

**ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು, ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಬದಲಾವಣೆ ಮಾಡಲಾಗುವುದು**.

- ಬೋಧಕ **(INSTRUCTOR)** – 26 ಹುದ್ದೆಗಳು
- ಸಹಾಯಕ ಬೋಧಕ (**ASSISTANT INSTRUCTOR)** – 16 ಹುದ್ದೆಗಳು
- **ಒಟ್ಟು** – **42 ಹುದ್ದೆಗಳು**

(ಗೃಹರಕ್ಷಕ ಹಾಗೂ ಪೌರರಕ್ಷಣಾ ಇಲಾಖೆಯಲ್ಲಿ ಖಾಲಿ ಇರುವ ಬೋಧಕ/ಸಹಾಯಕ ಬೋಧಕ ಹುದ್ದೆಗಳ ವರ್ಗೀಕರಣಕ್ಕೆ **ಅನುಬಂಧ–'ಅ'** & **'ಆ'** ನಲ್ಲಿ ನೀಡಲಾಗಿದೆ)

**5) ಅರ್ಹತಾ ಷರತ್ತುಗಳು :**

5.1 ಭಾರತೀಯ ನಾಗರೀಕನಾಗಿರತಕ್ಕದ್ದು.

5.2 ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

5.3 ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತನಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

5.4 ಹೈದ್ರಬಾದ್–ಕರ್ನಾಟಕ ಮೀಸಲಾತಿಗೊಳಪಡುವ ಹುದ್ದೆಗಳಿಗೆ ಆಯ್ಕೆ ಬಯಸುವ ಅಭ್ಯರ್ಥಿಗಳು ಹೈದ್ರಬಾದ್–ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಯಾಗಿರಬೇಕು.

6) **ವಯೋಮಿತಿ:**

6.1 **ಸಾಮಾನ್ಯ ಅಭ್ಯರ್ಥಿಗಳಿಗೆ:**

ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ ದಿನಾಂಕ 15.02.2019 ಕ್ಕೆ ಅಭ್ಯರ್ಥಿಯು ಕನಿಷ್ಠ 21 ವರ್ಷ ಪೂರೈಸಿರಬೇಕು ಹಾಗೂ ಈ ಕೆಳಕಂಡ ವಯಸ್ಸನ್ನು ಮೀರಿರಬಾರದು.

ಅ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 28 ವರ್ಷಗಳು.

ಆ) ಇತರೆ ಅಭ್ಯರ್ಥಿಗಳಿಗೆ 26 ವರ್ಷಗಳು.

6.2 **ಮಾಜಿ ಸೈನಿಕ ಅಭ್ಯರ್ಥಿಗಳಿಗೆ :**

ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದುಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ "ಅವರು ಸೇವೆ ಸಲ್ಲಿಸಿದ ಅವಧಿ" ಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಗಳನ್ನು ನೀಡಲಾಗುವುದು. ಮಾಜಿ ಯೋಧ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ.

7) **ಮಾಜಿ ಸೈನಿಕರ ಬಗ್ಗೆ ಟಿಪ್ಪಣಿ:**

1) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂಸೇನೆ, ನೌಕಾಸೇನೆ ಮತ್ತು ವಾಯುಸೇನೆಯಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿದ ವ್ಯಕ್ತಿ. (ಆದರೆ ಡಿಫೆನ್ಸ್ ಸೆಕ್ಯುರಿಟಿ ಕಾರ್ಪ್ಸ್ **(Defence Security Corps),** ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್ **(General Reserved Engineering Force),** ಲೋಕ್ ಸಹಾಯಕ್ ಸೇನಾ **(Lok Sahayak Sena)**ಮತ್ತು ಪ್ಯಾರಾ ಮಿಲಿಟರಿ ದಳ **(Para Military Forces)**ದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ) ಮತ್ತು

2) ಅಂತಹ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವವನು

**ಅಥವಾ**

3) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹಸೇವೆಯಲ್ಲಿ ಬಿಡುಗಡೆಯಾದವನು.

**ಅಥವಾ**

4) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದವನು.

**ಅಥವಾ**

5) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿ:

ಅ) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರ.

ಆ) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದವರು.

ಇ) ಶೌರ್ಯ ಪ್ರಶಸ್ತಿ ವಿಜೇತರು.

**ವಿವರಣೆ:-**

ಸೈನ್ಯದಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ, ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

7.2) ಮಾಜಿ ಯೋಧ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ.

7.3) ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 9(1) ರನ್ವಯ ಸೈನ್ಯದಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಮಾಜಿ ಸೈನಿಕ ಮಕ್ಕಳಿಗೆ ವಯೋಮಿತಿ ಸಡಿಲಿಕೆ, ಸಹಿಷ್ಣುತೆ ಪರೀಕ್ಷೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಯಾವುದೇ ತರಹದ ವಿನಾಯಿತಿಯನ್ನು ನೀಡಲಾಗುವುದಿಲ್ಲ. ಕರ್ತವ್ಯ ನಿರ್ವಹಿಸುತ್ತಿದ್ದ ಸೈನ್ಯದ ಅಧಿಕಾರಿಗಳಿಂದ ಅವಲಂಬಿತ ಪ್ರಮಾಣ ಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪ್ರಮಾಣ ಪತ್ರವನ್ನು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ **ದಿನಾಂಕ: 15.02.2019** ರೊಳಗಾಗಿ ಪಡೆದಿಟ್ಟುಕೊಂಡಿರತಕ್ಕದ್ದು.

**ಟಿಪ್ಪಣಿ:**

ಮೇಲಿನ ಷರತ್ತಿನ ಪ್ರಕಾರ ಮಾಜಿ ಸೈನಿಕ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಯಮಾನುಸಾರ ಆ ಮೀಸಲಾತಿಗೆ ಅರ್ಹರೇ? ಎಂಬುದನ್ನು ಹತ್ತಿರದ ಜಿಲ್ಲಾ ಸೈನಿಕ ಬೋರ್ಡ್‌ನಿಂದ ಖಚಿತಪಡಿಸಿಕೊಂಡು ಮೀಸಲಾತಿಯನ್ನು ಕೋರುವುದು ಸೂಕ್ತ.

8) **ವಿದ್ಯಾರ್ಹತೆ:**

**8.1) ಬೋಧಕ (INSTRUCTOR) ಹುದ್ದೆಗಳಿಗೆ ಸಂಬಂಧಿಸಿದಂತೆ:**

ಪದವಿ ಅಥವಾ ತತ್ಸಮಾನ ವಿಧ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕ, ಅಂದರೆ 15.02.2019 ಕ್ಕೆ ಹೊಂದಿರಬೇಕು.

**8.2) ಸಹಾಯಕ ಬೋಧಕ (ASSISTANT INSTRUCTOR) ಹುದ್ದೆಗಳಿಗೆ ಸಂಬಂಧಿಸಿದಂತೆ**

ಪದವಿ ಅಥವಾ ತತ್ಸಮಾನ ವಿಧ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕ, ಅಂದರೆ 15.02.2019ಕ್ಕೆ ಹೊಂದಿರಬೇಕು.

**8.3) ಟಿಪ್ಪಣಿ:**

ಎ ಮೇಲೆ ನಮೂದಿಸಿದಂತೆ ವಿಧ್ಯಾರ್ಹತೆಯನ್ನು ಹೊಂದದೇ ಇರುವ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದರೂ ನಂತರ ನೇಮಕಾತಿ ಸಮಿತಿಗೆ ವಿಧ್ಯಾರ್ಹತೆ ಹೊಂದಿರುವುದಿಲ್ಲವೆಂದು ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ಯಾವುದೇ ಹಂತದಲ್ಲಾದರೂ ರದ್ದುಪಡಿಸಲಾಗುವುದು.

ಬಿ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿಧ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಹರಾಗಿರುವುದಿಲ್ಲ. ಮೇಲಿನ ವಿಧ್ಯಾರ್ಹತೆಯನ್ನು ಹೊರತು ಪಡಿಸಿ ಬೇರೆ ಯಾವ ವಿಧ್ಯಾರ್ಹತೆಯನ್ನೂ ಪರಿಗಣಿಸಲಾಗುವುದಿಲ್ಲ. ಕೊನೆಯ ದಿನಾಂಕಕ್ಕೆ ಎಲ್ಲಾ ಅಭ್ಯರ್ಥಿಗಳು ಪದವಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣ ಹೊಂದಿದ ಅಂಕಪಟ್ಟಿಯನ್ನು ಹೊಂದಿರಬೇಕು.

ಸಿ ಮಾಜಿ ಸೈನಿಕ ಅಭ್ಯರ್ಥಿಗಳು ವಿಧ್ಯಾರ್ಹತೆಯ ಪ್ರಮಾಣ ಪತ್ರವನ್ನು ದಿನಾಂಕ: 15.02.2019 ರೊಳಗೆ ಹೊಂದಿದ್ದರೆ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಮಾತ್ರ ಪರಿಗಣಿಸಲಾಗುವುದು.

9) **ತರಬೇತಿ, ಖಾಯಂ ಪೂರ್ವ ಅವಧಿ ಮತ್ತು ವೇತನ ಶ್ರೇಣಿ :**

**9.1) ತರಬೇತಿ: (ಬೋಧಕ ಹಾಗೂ ಸಹಾಯಕ ಬೋಧಕ) (INSTRUCTOR AND ASSISTANT INSTRUCTOR)**

ಬೋಧಕ ಹಾಗೂ ಸಹಾಯಕ ಬೋಧಕ ಹುದ್ದೆಗೆ ನೇಮಕಾತಿ ಹೊಂದಿದ ಅಭ್ಯರ್ಥಿಗಳು ಗೃಹರಕ್ಷಕ ಹಾಗೂ ಪೌರರಕ್ಷಣಾ ಇಲಾಖೆಯ ಆರಕ್ಷಕ ಮಹಾ ನಿರ್ದೇಶಕರು ಮತ್ತು ಗೃಹರಕ್ಷಕ ದಳದ ಮಹಾ ಸಮಾದೇಷ್ಟರು ಇವರು ಕಾಲಕಾಲಕ್ಕೆ ನಿಗಧಿಪಡಿಸುವ ತರಬೇತಿಯನ್ನು ಪ್ರತಿ ವೃಂದದ ಪ್ರತಿ ಹುದ್ದೆಗೂ ಪ್ರತ್ಯೇಕವಾಗಿ ಪಡೆಯಬೇಕು. ತರಬೇತಿಯಲ್ಲಿ ನಿಗದಿಪಡಿಸಿದ ಪರೀಕ್ಷೆಗಳಲ್ಲಿ ಪ್ರಶಿಕ್ಷಣಾರ್ಥಿಯು ಉತ್ತೀರ್ಣರಾಗಬೇಕು. ನಿಗಧಿಪಡಿಸಿದ ಪರೀಕ್ಷೆಗಳಲ್ಲಿ ಅನುತ್ತೀರ್ಣರಾದ ಪ್ರಶಿಕ್ಷಣಾರ್ಥಿಯನ್ನು ತೆಗೆದುಹಾಕಲಾಗುವುದು.

**9.2) ಖಾಯಂಪೂರ್ವ ಅವಧಿ:**

ಬೋಧಕ ಹಾಗೂ ಸಹಾಯಕ ಬೋಧಕ ಹುದ್ದೆಗೆ ಆಯ್ಕೆಗೊಂಡ ಅಭ್ಯರ್ಥಿಗಳು ಸೇವೆಗೆ ಸೇರಿದ ದಿನಾಂಕದಿಂದ ಚಾಲ್ತಿಯಲ್ಲಿರುವ ನಿಯಮಾನುಸಾರ ಪ್ರತಿ ವೃಂದದ ಪ್ರತಿ ಹುದ್ದೆಗೂ ಪ್ರತ್ಯೇಕವಾಗಿ ಎರಡು ವರ್ಷ ಮತ್ತು 6 ತಿಂಗಳು ತರಬೇತಿ ಅವಧಿ ಒಳಗೊಂಡಂತೆ ಖಾಯಂ ಪೂರ್ವ ಅವಧಿಯಲ್ಲಿರುತ್ತಾರೆ.

**9.3) ವೇತನ ಶ್ರೇಣಿ:**

**ಬೋಧಕರಿಗೆ (INSTRUCTOR)**

. 37900–950–39800–1100–46400–1250–53900–1450–62600–1650–70850

**ಸಹಾಯಕ ಬೋಧಕರಿಗೆ (ASSISTANT INSTRUCTOR)**

.23500–550–24600–600–27000–650–29600–750–32600–850–36000–950–39800–1100–46400–1250–47650

**9.4) ಪಿಂಚಣಿ ಸೌಲಭ್ಯ: (ಬೋಧಕ ಹಾಗೂ ಸಹಾಯಕ ಬೋಧಕ) (INSTRUCTOR AND ASSISTANT INSTRUCTOR)**
ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ(ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ:31.03.2006 ರಂತೆ ನೂತನ ಅಂಶದಾಯಿ ಪಿಂಚಣಿ ಸೌಲಭ್ಯ ಅನ್ವಯವಾಗುವುದು.

10) **ದೇಹದಾರ್ಢ್ಯತೆ ಪರೀಕ್ಷೆ: (Phsyical Standard Test)**

**ಬೋಧಕ ಹಾಗೂ ಸಹಾಯಕ ಬೋಧಕ ಹುದ್ದೆಗೆ (INSTRUCTOR AND ASSISTANT INSTRUCTOR) ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಪ್ರತಿ ವೃಂದದ ಪ್ರತಿ ಹುದ್ದೆಗಳಿಗೆ ಪ್ರತ್ಯೇಕವಾಗಿ ದೇಹದಾರ್ಢ್ಯತೆ ಪರೀಕ್ಷೆಗಳ ಕದಿನಾಂಕ ಮತ್ತು ಸ್ಥಳವನ್ನು, ಗೃಹರಕ್ಷಕ ಮತ್ತು ಪೌರರಕ್ಷಣಾ ಇಲಾಖೆಯ ವೆಬ್‌ಸೈಟ್** www.ksp.gov.in or www.karnataka.gov.in / hgcd **ನಲ್ಲಿ ಪ್ರಕಟಿಸಲಾಗುವುದು ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ನಮೂದಿಸಿರುವ ಪ್ರವೇಶ/ಕರೆಪತ್ರಗಳನ್ನು ಗೃಹರಕ್ಷಕ ಹಾಗೂ ಪೌರರಕ್ಷಣಾ ಇಲಾಖೆಯ ಅಧಿಕೃತ ವೆಬ್‌ಸೈಟ್‌ನಿಂದ ಅಭ್ಯರ್ಥಿಗಳು ಕಡ್ಡಾಯವಾಗಿ ಅಂತರ್‌ಜಾಲದ ಮುಖಾಂತರ ಪ್ರತಿ ವೃಂದದ ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಡೌನ್‌ಲೋಡ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ. ಪ್ರವೇಶ ಪತ್ರವಿಲ್ಲದೇ ಪಿ.ಎಸ್.ಟಿ. ಪರೀಕ್ಷೆಗಳಿಗೆ ಅನುವು ಮಾಡಲಾಗುವುದಿಲ್ಲ. ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್** www.ksp.gov.in or www.karnataka.gov.in / hgcd **ನ್ನು ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ.**

10.1) **ಬೋಧಕ ಹಾಗೂ ಸಹಾಯಕ ಬೋಧಕ ಹುದ್ದೆಗೆ (INSTRUCTOR AND ASSISTANT INSTRUCTOR) ಅರ್ಜಿ ಸಲ್ಲಿಸಿದ** ಅಭ್ಯರ್ಥಿಗಳಿಗೆ ದೇಹದಾರ್ಢ್ಯತೆ ಪರೀಕ್ಷೆಯ ದಿನಾಂಕ ಮತ್ತು ಸ್ಥಳವನ್ನು ನೇಮಕಾತಿ ಪ್ರಾಧಿಕಾರ **ಈ ಕಛೇರಿಯ ಅಧಿಕೃತ ವೆಬ್‌ಸೈಟ್** www.ksp.gov.in or www.karnataka.gov.in / hgcd **ನಲ್ಲಿ ಪ್ರತಿ ವೃಂದದ ಪ್ರತಿ ಹುದ್ದೆಗೂ ಪ್ರತ್ಯೇಕವಾಗಿ ಪ್ರಕಟಿಸಲಾಗುವುದು.** ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ. ಆದ್ದರಿಂದ, ಅಭ್ಯರ್ಥಿಗಳು ಇಲಾಖೆಯ ವೈಬ್‌ಸೈಟ್ www.ksp.gov.in or www.karnataka.gov.in / hgcd ನ್ನು ದಿನನಿತ್ಯ ನೋಡಲು ತಿಳಿಸಲಾಗಿದೆ.

10.2) ದೈಹಿಕ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಸಂಬಂಧಪಟ್ಟ ಗೃಹರಕ್ಷಕ ಹಾಗೂ ಪೌರರಕ್ಷಣಾ ಅಕಾಡೆಮಿ, ನಂ.1, ಅಣ್ಣಾಸ್ವಾಮಿ ಮೊದಲಿಯಾರ್ ರಸ್ತೆ, ಬೆಂಗಳೂರು–560042 ಕಚೇರಿಯ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆಪತ್ರವನ್ನು ಪಡೆಯದೇ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ದೈಹಿಕ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ.

**10.3) ಅಭ್ಯರ್ಥಿಗಳು ದೈಹಿಕ ಪರೀಕ್ಷೆಗೆ ಬರುವಾಗ ಕಡ್ಡಾಯವಾಗಿ ನಿಗಧಿಪಡಿಸಿದ ವಿಧ್ಯಾರ್ಹತೆಯ ಮೂಲ ಅಂಕಪಟ್ಟಿ, ಮೀಸಲಾತಿ ಕೋರಿರುವ ಎಲ್ಲಾ ಮೂಲ ದಾಖಲಾತಿಗಳೊಂದಿಗೆ ಹಾಜರಾಗುವುದು.**

**10.4) ಅಭ್ಯರ್ಥಿಗಳು ದೇಹದಾರ್ಢ್ಯತೆ ಪರೀಕ್ಷೆಗೆ ಬರುವಾಗ ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.**

1) ಪಾಸ್‌ಪೋರ್ಟ್ (Passport)
2) ಚಾಲನಾ ಪರವಾನಗಿ ಪತ್ರ (Driving License)
3) ಪ್ಯಾನ್ ಕಾರ್ಡ್ (PAN Card)
4) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ/ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗಿ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)
5) ಸಾರ್ವಜನಿಕ ಬ್ಯಾಂಕುಗಳು/ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)
6) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)
7) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Caste Certificate with Photo)
8) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ(Ex-servicemen’s pension book/pension payment order)
9) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)
10) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).
11) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್.(AADHAR CARD).

10.5) ಕರೆಪತ್ರದ ಜೊತೆಗೆ ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ಸಹ ತರತಕ್ಕದ್ದು, ತಪ್ಪಿದಲ್ಲಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗಧಿತ ದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹವರನ್ನು ಅನರ್ಹಗೊಳಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.

**10.6) ದೇಹದಾರ್ಢ್ಯತೆ ಪರೀಕ್ಷೆ** (Physical Standard Test)

**ಬೋಧಕ ಹಾಗೂ ಸಹಾಯಕ ಬೋಧಕ ಹುದ್ದೆಗೆ (INSTRUCTOR AND ASSISTANT INSTRUCTOR) ಅರ್ಜಿ ಸಲ್ಲಿಸಿದ** ಅರ್ಜಿದಾರರು ಗೃಹರಕ್ಷಕ ಹಾಗೂ ಪೌರರಕ್ಷಣಾ ಇಲಾಖೆಯ (ವೃಂದ ಮತ್ತು ನೇಮಕಾತಿ) ನಿಯಮಗಳು, 2010 ಮತ್ತು 2013 ರಲ್ಲಿನ ಕ್ರಮಸಂಖ್ಯೆ 17ರ ಪುಟ ಸಂಖ್ಯೆ 7, ಮತ್ತು ಕ್ರಮ ಸಂಖ್ಯೆ 19 ರ ಪುಟ ಸಂಖ್ಯೆ 11ರ ಕಲಂ 5 ರಲ್ಲಿರುವಂತೆ ಈ ಕೆಳಕಂಡ ದೇಹದಾರ್ಢ್ಯತೆ ಹೊಂದಿರಬೇಕು.

**ಬೋಧಕ ಹಾಗೂ ಸಹಾಯಕ ಬೋಧಕ (INSTRUCTOR AND ASSISTANT INSTRUCTOR)**
**ಪುರುಷ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆ**

| | | |
|---|---|---|
| 1 | ಎತ್ತರ | ಕನಿಷ್ಠ 170 ಸೆಂ.ಮೀ. |
| 2 | ಎದೆ ಸುತ್ತಳತೆ | ಕನಿಷ್ಠ 81 ಸೆಂ.ಮೀ ವಿಸ್ತಾರಗೊಂಡ ನಂತರ ಕನಿಷ್ಠ 5 ಸೆಂ.ಮೀ ಅಂದರೆ 86 ಸೆಂ.ಮೀ ಗೆ ಕಡಿಮೆ ಇಲ್ಲದಂತೆ. |

**ಬೋಧಕ ಹಾಗೂ ಸಹಾಯಕ ಬೋಧಕ (INSTRUCTOR & ASSISTANT INSTRUCTOR)**
**ಮಹಿಳಾ ಅಭ್ಯರ್ಥಿಗಳಿಗೆ**

| | | |
|---|---|---|
| 1 | ಎತ್ತರ | ಕನಿಷ್ಠ 157 ಸೆಂ.ಮೀ. |
| 2 | ತೂಕ | 45 ಕೆ.ಜಿ. |

ಗೃಹರಕ್ಷಕ ಹಾಗೂ ಪೌರರಕ್ಷಣಾ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು, 2010 ರ ಕ್ರಮಸಂಖ್ಯೆ 17 ರ ಪುಟಸಂಖ್ಯೆ 7, 8 ಮತ್ತು ಕ್ರಮ ಸಂಖ್ಯೆ 19ರ ಪುಟ ಸಂಖ್ಯೆ: 11, 12 ರ ಕಾಲಂ 5 ರಲ್ಲಿ ನಿಗಧಿಪಡಿಸಿರುವ ದೈಹಿಕ ಹಾಗೂ ದೃಷ್ಠಿ ಪರೀಕ್ಷೆಗಾಗಿ ನೇಮಕಾತಿ ಸಮಿತಿಯು ರಚಿಸುವ ವೈದ್ಯಕೀಯ ಮಂಡಳಿಯ ಮುಂದೆ ಪ್ರತಿ ಹುದ್ದೆಗೂ ಪ್ರತ್ಯೇಕವಾಗಿ ಹಾಜರಾಗುವುದು.

10.7 ದೃಷ್ಟಿ (Vision)

**ದೂರದೃಷ್ಟಿ** (Distant Vision)

| ಉತ್ತಮ ದೃಷ್ಟಿ (Better Eye) | | ಕೆಳಮಟ್ಟದ ದೃಷ್ಟಿ (worse Eye) |
|---|---|---|
| 6/9 | | 6/9 |
| 6/9 | of | 6/12 |

**ಸಮೀಪ ದೃಷ್ಟಿ** (Near Vision)

| ಉತ್ತಮ ದೃಷ್ಟಿ (Better Eye) | | ಕೆಳಮಟ್ಟದದೃಷ್ಟಿ (worse Eye) |
|---|---|---|
| 0/6 | of | 0/8 |

ಎರಡೂ ಕಣ್ಣುಗಳಲ್ಲಿ ಪೂರ್ತಿ ದೃಷ್ಟಿ ಇರಬೇಕು, ಕಲರ್ ಬ್ಲೈಂಡ್‌ನೆಸ್, ಮೆಳ್ಳಗಣ್ಣು ಅಥವಾ ಯಾವುದೇ ರೀತಿಯ ದೃಷ್ಟಿ ದೋಷ ಇದ್ದಲ್ಲಿ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

10.8 ಶ್ರವಣ ಪರೀಕ್ಷೆ (Hearing Test)

1) Rinne's Test
2) Webber's Test
3) Tests for Vertigo

ಮೇಲಿನ ಯಾವುದೇ ಪರೀಕ್ಷೆಗಳಲ್ಲಿ ದೋಷ ಇದ್ದಲ್ಲಿ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

10.9) ಈ ಕೆಳಗಿನ ದೈಹಿಕ ಪರೀಕ್ಷೆಗಳಲ್ಲಿ ಯಾವುದೇ ನ್ಯೂನತೆಗಳು ಇದ್ದಲ್ಲಿ ಅನರ್ಹತೆ ಎಂದು ಪರಿಗಣಿಸಲಾಗುವುದು.

ಅ) ತಾಗುಮಂಡಿ (knock knees)

ಆ) ಬಾಗಿದಕಾಲುಗಳು (Bow legs)

ಇ) ಚಪ್ಪಟೆಪಾದ (Flat feet)

ಈ) ಅಪಧಮನಿಊತ (varicose veins)

ಉ) ಮಾತಿನಲ್ಲಿ ಅಡಚಣೆ (Impediment in speech)

**ಟಿಪ್ಪಣಿ :**

ದೈಹಿಕ ಸಾಮರ್ಥ್ಯ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳಿಗೆ ಯಾವುದೇ ಭತ್ಯೆಯನ್ನು ನೀಡಲಾಗುವುದಿಲ್ಲ ಹಾಗೂ ಅಭ್ಯರ್ಥಿಗಳು ಸ್ವಂತ ಖರ್ಚಿನಲ್ಲಿ ಹಾಜರಾಗುವುದು.

11) **ದೈಹಿಕ ಸಹನಾ ಸಾಮರ್ಥ್ಯ ಪರೀಕ್ಷೆ:(Physical Endurance Test):**

ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹರಾಗುವ ಅಭ್ಯರ್ಥಿಗಳಿಗೆ ಮಾತ್ರ ಪ್ರತಿ ವೃಂದದ ಪ್ರತಿ ಹುದ್ದೆಗೂ ಪ್ರತ್ಯೇಕವಾಗಿ ಈ ಕೆಳಕಂಡ ದೈಹಿಕ ಸಹನಾ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಲಾಗುವುದು

**ಬೋಧಕ ಹಾಗೂ ಸಹಾಯಕ ಬೋಧಕ ಹುದ್ದೆಗಳಿಗೆ: (INSTRUCTOR AND ASSISTANT INSTRUCTOR)**

| | | |
|---|---|---|
| **ಪುರುಷ ಅಭ್ಯರ್ಥಿಗಳಿಗೆ** | 2 ಕಿಲೋಮೀಟರ್ ಓಟ | ಅವಧಿ 10 ನಿಮಿಷ |
| **ಮಹಿಳಾ ಅಭ್ಯರ್ಥಿಗಳಿಗೆ** | 500 ಮೀಟರ್ ಓಟ | ಅವಧಿ 2 ನಿಮಿಷ 30 ಸೆಕೆಂಡ್ |
| **ಮಾಜಿ ಸೈನಿಕ ಅಭ್ಯರ್ಥಿಗಳಿಗೆ** | 500 ಮೀಟರ್ ಓಟ | ಅವಧಿ 2 ನಿಮಿಷ |

12) **ದೈಹಿಕ ಸಾಮರ್ಥ್ಯ ಪರೀಕ್ಷೆ:(Physical Efficiency Test) :**

ದೈಹಿಕ ಸಹನಾ ಸಾಮರ್ಥ್ಯ ಪರೀಕ್ಷೆಯಲ್ಲಿ ಅರ್ಹರಾದ ಅಭ್ಯರ್ಥಿಗಳಿಗೆ ಮಾತ್ರ ಪ್ರತಿ ವೃಂದದ ಪ್ರತಿ ಹುದ್ದೆಗೂ ಪ್ರತ್ಯೇಕವಾಗಿ ಈ ಕೆಳಕಂಡ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಲಾಗುವುದು.

**12.1)** **ಬೋಧಕ ಹಾಗೂ ಸಹಾಯಕ ಬೋಧಕ (INSTRUCTOR AND ASSISTANT INSTRUCTOR)**

| ಪುರುಷ ಅಭ್ಯರ್ಥಿಗಳಿಗೆ | | |
|---|---|---|
| 1) | 100 ಮೀಟರ್ ಓಟ | 14.5 ಸೆಕೆಂಡ್‌ಗಳು |
| 2) | ಎತ್ತರ ಜಿಗಿತ | 1.25 ಮೀಟರ್‌ಗಳು |
| 3) | ಉದ್ದ ಜಿಗಿತ | 4.00 ಮೀಟರ್‌ಗಳು |
| 4) | ಗುಂಡು ಎಸೆತ (7.26 ಕೆಜಿ) | 5.80 ಮೀಟರ್‌ಗಳು |
| 5) | 800 ಮೀಟರ್ ಓಟ | 2 ನಿಮಿಷ 50 ಸೆಕೆಂಡ್‌ಗಳು |

| ಮಾಜಿ ಸೈನಿಕ ಅಭ್ಯರ್ಥಿಗಳಿಗೆ | | |
|---|---|---|
| 1) | 100 ಮೀಟರ್ ಓಟ | 17 ಸೆಕೆಂಡ್‌ಗಳು |
| 2) | ಎತ್ತರ ಜಿಗಿತ | 1.00 ಮೀಟರ್‌ಗಳು |
| 3) | ಉದ್ದ ಜಿಗಿತ | 3.00 ಮೀಟರ್‌ಗಳು |
| 4) | ಗುಂಡು ಎಸೆತ (4.00 ಕೆಜಿ) | 4.50 ಮೀಟರ್‌ಗಳು |
| 5) | 200 ಮೀಟರ್ ಓಟ | 35 ಸೆಕೆಂಡ್‌ಗಳು |

| ಮಹಿಳಾ ಅಭ್ಯರ್ಥಿಗಳಿಗೆ | | |
|---|---|---|
| 1) | 100 ಮೀಟರ್ ಓಟ | 18.5 ಸೆಕೆಂಡ್‌ಗಳು |
| 2) | ಎತ್ತರ ಜಿಗಿತ | 0.90 ಮೀಟರ್‌ಗಳು |
| 3) | ಉದ್ದ ಜಿಗಿತ | 2.50 ಮೀಟರ್‌ಗಳು |
| 4) | ಗುಂಡು ಎಸೆತ (4 ಕೆಜಿ) | 3.75 ಮೀಟರ್‌ಗಳು |
| 5) | 200 ಮೀಟರ್ ಓಟ | 40 ಸೆಕೆಂಡುಗಳು |

**12.2** **ಟಿಪ್ಪಣಿ:**

1. ಬೋಧಕ ಹಾಗೂ ಸಹಾಯಕ ಬೋಧಕ ಹುದ್ದೆಗಳಿಗೆ ಪ್ರತ್ಯೇಕವಾಗಿ ದೈಹಿಕ ಸಾಮರ್ಥ್ಯ ಪರೀಕ್ಷೆ ನಡೆಸಲಾಗುವುದು. ಪ್ರತಿಯೊಂದು ವೃಂದದ, ಪ್ರತಿಯೊಂದು ಪರೀಕ್ಷೆಗೆ 5 ಅಂಕಗಳನ್ನು ನಿಗದಿಪಡಿಸಲಾಗಿದೆ. ಲಿಖಿತ ಪರೀಕ್ಷೆಗೆ ಅರ್ಹರಾಗಲು ಮೇಲಿನ 5 ದೈಹಿಕ ಸಾಮರ್ಥ್ಯ ಪರೀಕ್ಷೆಗಳ ಪೈಕಿ ಕನಿಷ್ಠ 3 ರಲ್ಲಿ ಉತ್ತೀರ್ಣರಾಗಬೇಕು. ಅದರಂತೆ 3, 4 ಹಾಗೂ 5 ದೈಹಿಕ ಸಾಮರ್ಥ್ಯ ಪರೀಕ್ಷೆಗಳಲ್ಲಿ ಉತ್ತೀರ್ಣರಾಗುವ ಅಭ್ಯರ್ಥಿಗಳಿಗೆ ಅನುಕ್ರಮವಾಗಿ 15, 20 ಹಾಗೂ 25 ಅಂಕಗಳನ್ನು ನೀಡಲಾಗುವುದು.
2. ಅಭ್ಯರ್ಥಿಗಳು ಯಾವುದೇ 3 ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಗೈರು ಹಾಜರಾದಲ್ಲಿ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು.
3. ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ರಾಜ್ಯದ ವಿವಿಧ ಭಾಗಗಳಲ್ಲಿ ನಡೆಸಲಾಗುವುದು.
4. ಒಂದು ವೇಳೆ ಯಾವುದೇ ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದಲ್ಲಿ ಅಂತಹ ಅಭ್ಯರ್ಥಿಯನ್ನು ಅನರ್ಹಗೊಳಿಸಲಾಗುವುದು / ಅಭ್ಯರ್ಥಿತನವನ್ನು ರದ್ದುಗೊಳಿಸಲಾಗವುದು.
5. ಪ್ರತಿ ವೃಂದದ ಹುದ್ದೆಯ ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯಲ್ಲಿ ಅರ್ಹರಾದ ಅಭ್ಯರ್ಥಿಗಳಿಗೆ ಮಾತ್ರ ಪ್ರತಿ ವೃಂದದ ಹುದ್ದೆಗೂ ಪ್ರತ್ಯೇಕವಾಗಿ ಲಿಖಿತ ಪರೀಕ್ಷೆ ನಡೆಸಲಾಗುವುದು.
6. ಅಭ್ಯರ್ಥಿಗಳಿಗೆ ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಇಲಾಖೆಯ ವೆಬ್‌ಸೈಟ್ www.ksp.gov.in or www.karnataka.gov.in / hgcd ನಲ್ಲಿ ಪ್ರಕಟಿಸಲಾಗುವುದು.

7. ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ನಡೆಸುವಾಗ ಅಭ್ಯರ್ಥಿಗಳಿಗೆ ಉಂಟಾಗಬಹುದಾದ ಊನ, ಪೆಟ್ಟು ಅಥವಾ ಯಾವುದೇ ರೀತಿಯ ಅಪಘಾತಗಳಿಗೆ ಇಲಾಖೆಯು ಜವಾಬ್ದಾರಿಯಾಗಿರುವುದಿಲ್ಲ.

**12.3 ವಿಶೇಷ ಸೂಚನೆ:**

ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಹಾಜರಾಗುವ ಮುನ್ನ ಅಭ್ಯರ್ಥಿಗಳು ದೈಹಿಕವಾಗಿ ಸಧೃಡರಿರಬೇಕು. ಈ ಪರೀಕ್ಷೆಗಳ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ/ತೊಂದರೆಗಳಿಗೆ ಇಲಾಖೆ/ನೇಮಕಾತಿ ಸಮಿತಿಯು ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಂತ ಹಿತದೃಷ್ಠಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು, ಅಭ್ಯರ್ಥಿಯ ಆರೋಗ್ಯವು ಎಲ್ಲಾ ರೀತಿಯಿಂದಲೂ ಸದೃಢವಾಗಿದೆ ಎಂದು ಖಚಿತಪಡಿಸಿಕೊಂಡು ಇಲಾಖೆ ನಡೆಸುವ ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಎಲ್ಲಾ ವಿಧದಿಂದಲೂ ಅರ್ಹನೆಂದು ಮುಂಚಿತವಾಗಿಯೇ ತಿಳಿದುಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಕನಿಷ್ಠ ಒಂದುತಿಂಗಳ ಮುಂಚೆಯಿಂದಲೇ ದೈಹಿಕಸಾಮರ್ಥ್ಯ ಪರೀಕ್ಷೆಗೆ ಅಭ್ಯರ್ಥಿಗಳು ಸಾಕಷ್ಟು ಅಭ್ಯಾಸ ಮಾಡಿಕೊಳ್ಳತಕ್ಕದ್ದು.

**ಟಿಪ್ಪಣಿ:**

**1)** ಬೋಧಕ/ಸಹಾಯಕ ಬೋಧಕರ ಹುದ್ದೆಗಳಿಗೆ ಪ್ರತ್ಯೇಕವಾಗಿ ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ದೈಹಿಕ ಪರೀಕ್ಷೆಯ ಸಮಿತಿಯು ನಡೆಸುತ್ತದೆ. ಯಾವುದೇ ಇತರೆ ವೈದ್ಯಕೀಯ ಪ್ರಮಾಣ ಪತ್ರದ ಆಧಾರದ ಮೇಲೆ ಪರಿಗಣಿಸಲಾಗುವುದಿಲ್ಲ. ದೈಹಿಕ ಪರೀಕ್ಷೆಯ ಸಮಿತಿಯು ನೀಡುವ ಫಲಿತಾಂಶವೇ ಅಂತಿಮವಾಗಿರುತ್ತದೆ.

**2)** ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆ ಪೂರ್ಣಗೊಂಡ ನಂತರ ಅಭ್ಯರ್ಥಿಗಳು ದೈಹಿಕ ಪರೀಕ್ಷೆ ಸಮಿತಿ ಸಮ್ಮುಖದಲ್ಲಿ ನಿಗದಿತ ನಮೂನೆಗೆ ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು. ಇಲ್ಲವಾದರೆ ಅಂತಹವರನ್ನು ಅನರ್ಹರೆಂದು ಪರಿಗಣಿಸಲಾಗುವುದು

**3)** ಅಭ್ಯರ್ಥಿಗಳು ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯಲ್ಲಿ ಅರ್ಹಗೊಂಡಲ್ಲಿ ಮಾತ್ರ ಲಿಖಿತ ಪರೀಕ್ಷೆಗೆ ಅರ್ಹತೆ ಪಡೆಯುವರು

**4)** ಪಾರದರ್ಶಕತೆಗಾಗಿ ಮೇಲೆ ಹೇಳಿದ ಎಲ್ಲಾ ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ಚಿತ್ರೀಕರಣ ಮಾಡಲಾಗುವುದು.

**13)** **ಲಿಖಿತ ಪರೀಕ್ಷೆ: (Written Examination)**: (Instructor and Assistant Instructor)

**ಬೋಧಕ ಹಾಗೂ ಸಹಾಯಕ ಬೋಧಕ ಹುದ್ದೆಗಳ ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳನ್ನು ಮಾತ್ರ ಲಿಖಿತ ಪರೀಕ್ಷೆಗಾಗಿ ಪ್ರತಿ ವೃಂದದ ಹುದ್ದೆಗೂ ಪ್ರತ್ಯೇಕವಾಗಿ ಕರೆಯಲಾಗುವುದು.**

13.1) ಬೋಧಕ/ಸಹಾಯಕ ಬೋಧಕ ಹುದ್ದೆಗಳ ಲಿಖಿತ ಪರೀಕ್ಷೆಯು, ಪದವಿ ಗುಣಮಟ್ಟದ (Degree Standard) ಕನ್ನಡ / ಇಂಗ್ಲೀಷ್ ಭಾಷೆಯ ಪ್ರತ್ಯೇಕ ಪ್ರಶ್ನೆ ಪತ್ರಿಕೆಗಳನ್ನು ಒಳಗೊಂಡಿರುತ್ತದೆ. ಪ್ರತಿ ವೃಂದದ ಹುದ್ದೆಗೂ ಬೇರೆ ಬೇರೆ ದಿನಾಂಕಗಳಂದು ಪ್ರತ್ಯೇಕವಾಗಿ ಲಿಖಿತ ಪರೀಕ್ಷೆಗಳನ್ನು ನಡೆಸಲಾಗುವುದು.

ಅ) **ಪ್ರಶ್ನೆ ಪತ್ರಿಕೆ–1:** ಈ ಪತ್ರಿಕೆಯಲ್ಲಿ ಎರಡು ಭಾಗಗಳಿರುತ್ತವೆ. ಮೊದಲನೇ ಭಾಗದಲ್ಲಿ ಕನ್ನಡ/ಇಂಗ್ಲೀಷ್ ಭಾಷೆಯಲ್ಲಿ 20 ಅಂಕಕ್ಕೆ ನಿಗಧಿಪಡಿಸಿದ ಪ್ರಬಂಧ ರಚನೆ ಇರುತ್ತದೆ. ಎರಡನೇ ಭಾಗದಲ್ಲಿ 20 ಅಂಕಕ್ಕೆ ಆಂಗ್ಲ ಭಾಷೆಯಿಂದ ಕನ್ನಡಕ್ಕೆ ಮತ್ತು ಕನ್ನಡ ಭಾಷೆಯಿಂದ ಆಂಗ್ಲ ಭಾಷೆಗೆ (ಪ್ಯಾಸೇಜ್) ಅನುವಾದ ಇರುತ್ತದೆ. ಪ್ರಶ್ನೆ ಪತ್ರಿಕೆ (1)ಕ್ಕೆ ಒಂದು ಗಂಟೆ ಕಾಲಾವಧಿಯನ್ನು ನಿಗಧಿಪಡಿಸಿದ್ದು, ಈ ಪ್ರಶ್ನೆಪತ್ರಿಕೆಯು ಒಟ್ಟು 40 ಅಂಕಗಳನ್ನು ಹೊಂದಿರುತ್ತದೆ. ಕನಿಷ್ಠ ಅಂಕ ನಿಗಧಿಪಡಿಸಿರುವುದಿಲ್ಲ.

ಆ) **ಪ್ರಶ್ನೆ ಪತ್ರಿಕೆ–2:** ಈ ಪತ್ರಿಕೆಯು **(1)** ಸಾಮಾನ್ಯ ಜ್ಞಾನ ಅಧ್ಯಯನಕ್ಕೆ ಸಂಬಂಧಿಸಿದ್ದು, ಎ) ವಿಜ್ಞಾನ ಬಿ) ಭೂಗೋಳ ಸಿ) ಇತಿಹಾಸ ಡಿ) ಭಾರತೀಯ ಸಂವಿಧಾನ ಇ) ರಾಷ್ಟ್ರೀಯ ಸ್ವಾತಂತ್ರ್ಯ ಚಳುವಳಿಗಳಿಗೆ ಸಂಬಂಧಿಸಿರುತ್ತದೆ.

ಹಾಗೂ (2) ಸಾಮಾನ್ಯ ಮಾನಸಿಕ ಸಾಮರ್ಥ್ಯದಡಿಯಲ್ಲಿ ಎ) ಗಣಿತ ಕೌಶಲ್ಯ ಬಿ) ಭೌಗೋಳಿಕ ಗುರುತಿಸುವಿಕೆ ಕೌಶಲ್ಯಗಳು ಸಿ) ಗ್ರಹಣ ಶಕ್ತಿ ಡಿ) ತೀರ್ಪು ಮತ್ತು ಇ) ನಿರ್ಧಾರಕ ಸಾಮರ್ಥ್ಯ. ಈ ಪತ್ರಿಕೆಯು ಬಹು ಆಯ್ಕೆಗಳುಳ್ಳ ಆಬ್ಜೆಕ್ಟೀವ್‌ಟೈಪ್ ಆಗಿದ್ದು, ಒಂದು ಗಂಟೆ ಮೂವತ್ತು ನಿಮಿಷದ ಅವಧಿಯದ್ದಾಗಿದ್ದು, 150 ಅಂಕಗಳನ್ನು ಹೊಂದಿರುತ್ತದೆ.

13.2) ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಯಲ್ಲಿ ಹಾಜರಿರತಕ್ಕದ್ದು. ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಉತ್ತರ ಪತ್ರಿಕೆಯನ್ನು ಭರ್ತಿ ಮಾಡುವ ಬಗ್ಗೆ ಕೆಲವು ಮುಖ್ಯವಾದ ಮಾರ್ಗಸೂಚನೆಗಳನ್ನು ನೀಡುವರು.

13.3) ನೇಮಕಾತಿ ಸಮಿತಿಯು ನಡೆಸುವ ಯಾವುದೇ ಪರೀಕ್ಷೆಗಳಲ್ಲಿ ಅನುಚಿತವಾಗಿ ವರ್ತಿಸಿದರೆ ಅಥವಾ ನಕಲು ಮಾಡಿದ್ದು ಕಂಡುಬಂದರೆ ಅಥವಾ ನಕಲು ಮಾಡುವ ಸಾಮಗ್ರಿಗಳನ್ನು ಹೊಂದಿದ್ದರೆ ಅಂತಹ ಅಭ್ಯರ್ಥಿಗಳನ್ನು 3 ವರ್ಷಗಳ ಕಾಲ ಡಿಬಾರ್ ಮಾಡಲಾಗುವುದು.

13.4) ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಪೋನ್‌ಗಳನ್ನು ನಿಷೇಧಿಸಲಾಗಿದೆ. ಪರೀಕ್ಷೆ ಬರೆಯುವಾಗ ಅಭ್ಯರ್ಥಿಗಳು ಮೊಬೈಲ್ ಪೋನುಗಳನ್ನು ಉಪಯೋಗಿಸಿದರೆ/ಹೊಂದಿದ್ದರೆ ಅವರನ್ನು ಅನರ್ಹಗೊಳಿಸಲಾಗುತ್ತದೆ.

13.5) ಎಲೆಕ್ಟ್ರಾನಿಕ್ ಸಾಮಗ್ರಿಗಳಾದ ಪೇಜರ್, ಕ್ಯಾಲುಕಲೇಟರ್ ಇತ್ಯಾದಿಗಳನ್ನು ಪರೀಕ್ಷಾ ಕೊಠಡಿಗೆ ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ.

13.6) **ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮಾರ್ಥ್ಯ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೆ ಮಾತ್ರ ಲಿಖಿತ ಪರೀಕ್ಷೆಯನ್ನು ಪ್ರತಿ ವೃಂದದ ಹುದ್ದೆಗೂ ಪ್ರತ್ಯೇಕವಾಗಿ ರಾಜ್ಯದ ವಿವಿಧ ಕೇಂದ್ರಗಳಲ್ಲಿ ನಡೆಸಲಾಗುವುದು.** ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ. ಪರೀಕ್ಷೆಯ ದಿನಾಂಕವನ್ನು ಮತ್ತು ಪರೀಕ್ಷಾ ಕೇಂದ್ರವನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ನೀಡಲಾಗುವುದು. **ಆದ್ದರಿಂದ ಅಭ್ಯರ್ಥಿಗಳು ಇಲಾಖೆಯ ವೈಬ್‌ಸೈಟ್** www.ksp.gov.in or www.karnataka.gov.in / hgcd**ನ್ನು ದಿನ ನಿತ್ಯ ನೋಡಲು ತಿಳಿಸಲಾಗಿದೆ.**

13.7) **ಆನ್‌ಲೈನ್ ಮುಖಾಂತರ ಮಾತ್ರ ಅರ್ಜಿ ಸಲ್ಲಿಸಿರುವುದರಿಂದ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಪ್ರತ್ಯೇಕವಾಗಿ ಅಂಚೆ ಮುಖಾಂತರ ನೀಡಲಾಗುವುದಿಲ್ಲ,** ಆದ್ದರಿಂದ ಲಿಖಿತ ಪರೀಕ್ಷೆಯ ಕರೆಪತ್ರವನ್ನು **ಪ್ರತಿ ಹುದ್ದೆಗೂ ಪ್ರತ್ಯೇಕವಾಗಿ** ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in or www.karnataka.gov.in / hgcd ಅಂತರ್‌ಜಾಲದ ಮುಖಾಂತರ ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು (Download). ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in or www.karnataka.gov.in / hgcd ನ್ನು ದಿನನಿತ್ಯ ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ. ಕರೆಪತ್ರವನ್ನು ಪಡೆಯದೇ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ಲಿಖಿತ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ.

13.8) **ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಪ್ಯಾರಾ 10.4ರಲ್ಲಿ ಹೇಳಲಾದ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು.**

13.9) **ಲಿಖಿತ ಪರೀಕ್ಷೆಗೆ ತರಬೇಕಾದ ಅಗತ್ಯ ದಾಖಲೆಗಳು**

1) ಲಿಖಿತ ಪರೀಕ್ಷೆಯ ಕರೆಪತ್ರ,
2) ದೇಹದಾರ್ಢ್ಯತೆ ಪರೀಕ್ಷೆಯ ಫಲಿತಾಂಶ ಹಾಳೆ,
3) ಗುರುತಿನ ಚೀಟಿ,
4) ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿ ತರತಕ್ಕದ್ದು. ತಪ್ಪಿದಲ್ಲಿ ಲಿಖಿತ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

**13.10) ಸೂಚನೆಗಳು:**

ಅ) ಪ್ರಶ್ನೆ ಪತ್ರಿಕೆ (II) ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯದಾಗಿರುತ್ತದೆ.

ಆ) ಪ್ರಶ್ನೆ ಪತ್ರಿಕೆಯಲ್ಲಿನ ಪ್ರಶ್ನೆಗಳಿಗೆ ಉತ್ತರಗಳನ್ನು ಓ.ಎಂ.ಆರ್ ಶೀಟ್‌ನಲ್ಲಿ **ಕಪ್ಪು ಅಥವಾ ನೀಲಿ** ಬಣ್ಣದ ಬಾಲ್‌ಪಾಯಿಂಟ್ ಪೆನ್ನಿನಿಂದ ಮಾತ್ರ ಗುರುತಿಸಬೇಕಾಗುತ್ತದೆ. ನಿಗದಿತ ಜಾಗದಲ್ಲಿ ಪ್ರಶ್ನೆ ಪತ್ರಿಕೆಯ ಶ್ರೇಣಿ (ಎ,ಬಿ,ಸಿ ಇತ್ಯಾದಿ) ಹಾಗೂ ಅಭ್ಯರ್ಥಿಯು ಅರ್ಜಿ ಸಂಖ್ಯೆ, ರೋಲ್ ನಂಬರ್ ಮತ್ತು ಸಹಿಯನ್ನು ತಪ್ಪದೇ ಭರ್ತಿ/ನಮೂದು ಮಾಡಬೇಕು. ಇದನ್ನು ತುಂಬದಿದ್ದರೆ ಉತ್ತರಪತ್ರಿಕೆಯನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ ಹಾಗೂ ಅಭ್ಯರ್ಥಿ ಆಯ್ಕೆಗೆ ಅನರ್ಹರಾಗುತ್ತಾರೆ. ಆದ್ದರಿಂದ ಅಭ್ಯರ್ಥಿಯು ಸರಿಯಾಗಿ ಮೇಲಿನ ಮಾಹಿತಿ/ವಿವರಗಳನ್ನು ಕಡ್ಡಾಯವಾಗಿ ಗುರುತಿಸಬೇಕು.

ಇ) ಅಭ್ಯರ್ಥಿಗಳು ಅರ್ಜಿ ಸಂಖ್ಯೆ, ರೋಲ್ ನಂಬರ್ ಇತ್ಯಾದಿ ಭರ್ತಿ ಮಾಡಿದ ನಂತರ ನಿಗದಿತ ಜಾಗದಲ್ಲಿ ತಪ್ಪದೇ ಸಹಿ ಮಾಡಬೇಕು ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು.

ಈ) ಅರ್ಜಿ ಸಂಖ್ಯೆ, ರೋಲ್ ನಂಬರ್ ಇತ್ಯಾದಿಗಳನ್ನು ಭರ್ತಿ ಮಾಡದೆ ಪರೀಕ್ಷೆ ಮುಗಿದ ನಂತರ ಅದನ್ನು ಪರಿಗಣಿಸುವಂತೆ ಕೋರಿದಲ್ಲಿ ಅಂತಹ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

13.11) ಪ್ರಶ್ನೆ ಪತ್ರಿಕೆಯಲ್ಲಿನ ಯಾವುದಾದರು ಪ್ರಶ್ನೆಯ ಬಗ್ಗೆ ಆಕ್ಷೇಪಣೆ ಇದ್ದಲ್ಲಿ. ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲು ಆಯಾ ಪರೀಕ್ಷಾ ದಿನವೇ ಸಂಬಂಧಿತ ಪರೀಕ್ಷಾ ಮೇಲ್ವಿಚಾರಕರ ಮುಖಾಂತರ ಅಭ್ಯರ್ಥಿಯ ಹೆಸರು, ವಿಳಾಸ, ನೋಂದಣಿಸಂಖ್ಯೆ. ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು ಪರೀಕ್ಷಾ ಮೇಲ್ವಿಚಾರಕರಿಗೆ ಸಲ್ಲಿಸಿ ಸ್ವೀಕೃತಿ(Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಸಲ್ಲಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ. ಪ್ರಶ್ನೆ ಪತ್ರಿಕೆಯಲ್ಲಿ ಯಾವುದೇ ದೋಷ ಕಂಡುಬಂದಲ್ಲಿ ಅದನ್ನು ತಕ್ಷಣ ಮೇಲ್ವಿಚಾರಕರ ಗಮನಕ್ಕೆ ತಂದು ಅದನ್ನು ಸರಿಪಡಿಸಿಕೊಳ್ಳಬೇಕು. ಪರೀಕ್ಷೆ ಮುಗಿದ ನಂತರ ಅದರ ಬಗ್ಗೆ ನೇಮಕಾತಿ ಸಮಿತಿಯ ಗಮನಕ್ಕೆ ತಂದರೆ ಅಂತಹ ಆಕ್ಷೇಪಣೆಗಳನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ.

**14) ಮೌಖಿಕ ಪರೀಕ್ಷೆ: (Viva voce):**

ಬೋಧಕ ಹಾಗೂ ಸಹಾಯಕ ಬೋಧಕ ಹುದ್ದೆಯ ಲಿಖಿತ ಪರೀಕ್ಷೆಗಳಲ್ಲಿ ಗಳಿಸಿದ ಅಂಕಗಳ ಆಧಾರದ ಮೇರೆಗೆ ಪ್ರತ್ಯೇಕವಾಗಿ ಪ್ರತಿ ವೃಂದದ ಹುದ್ದೆಗಳ ವರ್ಗೀಕರಣಕ್ಕೆ ಅನುಗುಣವಾಗಿ ಮೌಖಿಕ ಪರೀಕ್ಷೆಗೆ 1:3ರ ಅನುಪಾತದಲ್ಲಿ (ಒಂದು ಹುದ್ದೆಗೆ ಮೂರು ಅಭ್ಯರ್ಥಿಗಳು) ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಪ್ರತಿ ವೃಂದದ ಹುದ್ದೆಗೂ ಪ್ರತ್ಯೇಕವಾಗಿ ಮೌಖಿಕ ಪರೀಕ್ಷೆಯ ದಿನಾಂಕ ಮತ್ತು ಸ್ಥಳವನ್ನು ಇಲಾಖೆಯ ವೆಬ್‌ಸೈಟ್ www.ksp.gov.in or www.karnataka.gov.in / hgcd ನಲ್ಲಿ ಪ್ರಕಟಿಸಲಾಗುವುದು. ಆದ್ದರಿಂದ, ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in or www.karnataka.gov.in/hgcd ನ್ನು ದಿನನಿತ್ಯ ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ. ಪ್ರತಿ ವೃಂದದ ಹುದ್ದೆಯ ಮೌಖಿಕ ಪರೀಕ್ಷೆಯು 10 ಅಂಕಗಳನ್ನುಹೊಂದಿರುತ್ತದೆ. ಕನಿಷ್ಠ ಅಂಕಗಳನ್ನು ನಿಗದಿಪಡಿಸಿರುವುದಿಲ್ಲ. ದೈಹಿಕ ಸಾಮರ್ಥ್ಯ ಪರೀಕ್ಷೆ, ಲಿಖಿತ ಪರೀಕ್ಷೆ ಹಾಗೂ ಮೌಖಿಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಪ್ರತಿ ವೃಂದದ ಹುದ್ದೆಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಅಂತಿಮ ಆಯ್ಕೆ ಪಟ್ಟಿಯನ್ನು ಆಯ್ಕೆ ಪ್ರಾದಿಕಾರವು ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ, ಕಾನೂನು ಮತ್ತು ನಿಯಮಗಳಿಗೆ ಅನುಸಾರವಾಗಿ ಒದಗಿಸಿದ ಮೀಸಲಾತಿಗನುಗುಣವಾಗಿ ತಯಾರಿಸಿ ಅಂತಿಮ ಆಯ್ಕೆ ಪಟ್ಟಿಯನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗುವುದು.

**ಟಿಪ್ಪಣಿ:** ಅಭ್ಯರ್ಥಿಗಳು ಮೌಖಿಕ ಪರೀಕ್ಷೆಗೆ ಹಾಜರಾಗುವ ದಿನ, ಬೆಳಿಗ್ಗೆ ಪರೀಕ್ಷೆ ಪ್ರಾರಂಭವಾಗುವ ಒಂದು ಗಂಟೆ ಮೊದಲು ಮೂಲ ದಾಖಲಾತಿಗಳನ್ನು ಹಾಜರುಪಡಿಸತಕ್ಕದ್ದು. ಒಂದು ವೇಳೆ ಹಾಜರುಪಡಿಸದೇ ಇದ್ದಲ್ಲಿ ಅಥವಾ ಮೂಲ ದಾಖಲಾತಿಗಳಲ್ಲಿ ಯಾವುದೇ ರೀತಿಯ ವ್ಯತ್ಯಾಸಗಳು ಕಂಡುಬಂದಲ್ಲಿ, ಅಂತಹ ಅಭ್ಯರ್ಥಿಗಳನ್ನು ಮೌಖಿಕ ಪರೀಕ್ಷೆಗೆ ಅನರ್ಹಗೊಳಿಸಲಾಗುವುದು ಹಾಗೂ ಮುಂದಿನ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ. ಹಾಜರುಪಡಿಸಿದ ಮೂಲ ದಾಖಲಾತಿಗಳು ಖೋಟಾ ಅಥವಾ ತಿದ್ದಲಾದ ದಾಸ್ತಾವೇಜುಗಳೆಂದು ಕಂಡು ಬಂದರೆ ಅಂತಹ ಅಭ್ಯರ್ಥಿಯನ್ನು ಕ್ರಿಮಿನಲ್ ಮೊಕದ್ದಮೆಗಳಿಗೆ ಒಳಪಡಿಸಲಾಗುವುದು.

15) **<u>ಆಯ್ಕೆಯ ವಿಧಾನ:</u>**

ಬೋಧಕ ಹಾಗೂ ಸಹಾಯಕ ಬೋಧಕ ಹುದ್ದೆಯ ದೈಹಿಕ ಸಾಮರ್ಥ್ಯ ಪರೀಕ್ಷೆ, ಲಿಖಿತ ಪರೀಕ್ಷೆ ಹಾಗೂ ಮೌಖಿಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಪ್ರಾದಿಕಾರವು ಖಾಲಿ ಹುದ್ದೆಗಳ ಸಂಖ್ಯೆ ಹಾಗೂ ಕಾನೂನು ಮತ್ತು ನಿಯಮಗಳಿಗೆ ಅನುಸಾರವಾಗಿ ಒದಗಿಸಿದ ಮೀಸಲಾತಿಗನುಗುಣವಾಗಿ ಪ್ರತ್ಯೇಕವಾಗಿ ಬೋಧಕ ಹಾಗೂ ಸಹಾಯಕ ಬೋಧಕ ವೃಂದದ ಹುದ್ದೆಗಳಿಗೆ ಅಂತಿಮ ಆಯ್ಕೆ ಪಟ್ಟಿಯನ್ನು ತಯಾರಿಸಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗುವುದು.

**16) <u>ಜಾತಿ ಮೀಸಲಾತಿ ಪ್ರಮಾಣ ಪತ್ರಗಳು :</u>**

ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಕಂಡ ನಮೂನೆಗಳಲ್ಲಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

1) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶಿಲ್ದಾರ್ ರವರಿಂದ ಪಡೆದ **ನಮೂನೆ–'ಡಿ'** ಪ್ರಮಾಣ ಪತ್ರ. **(ಅನುಬಂಧ–1)**
2) ಪ್ರವರ್ಗ–1 ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದ **ನಮೂನೆ–'ಇ'** ಪ್ರಮಾಣ ಪತ್ರ **(ಅನುಬಂಧ–2).**
3) ಪ್ರವರ್ಗ– 2ಎ, 2ಬಿ, 3ಎ, 3ಬಿ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದ **ನಮೂನೆ–'ಎಫ್'** ಪ್ರಮಾಣ ಪತ್ರ **(ಅನುಬಂಧ–3).**

**ಸೂಚನೆ: ನಮೂನೆ-'ಎಫ್'** ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: 15.02.2019 ಕ್ಕೆ ಐದು ವರ್ಷಕ್ಕಿಂತ ಹಳೆಯದಾಗಿರಬಾರದು

**17)** **ಗ್ರಾಮೀಣ ಮೀಸಲಾತಿ:**

1) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಮಾಡಿರಬೇಕು.

2) ಅಭ್ಯರ್ಥಿಯು ವ್ಯಾಸಂಗ ಮಾಡಿದ ಸ್ಥಳವು ವ್ಯಾಸಂಗ ಮಾಡಿದ ಅವಧಿಯಲ್ಲಿ ಅಂದಿನ ಕರ್ನಾಟಕ ಪೌರನಿಗಮಗಳ ಅಧಿನಿಯಮ 1976ರ ಅಥವಾ ಕರ್ನಾಟಕ ಪೌರಸಭೆಗಳ ಅದಿನಿಯಮ, 1964ರ ಅಡಿಯಲ್ಲಿ ನಿರ್ಧಿಷ್ಟಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆಯ ಹಂತದಲ್ಲಿರುವ ಪ್ರದೇಶಗಳ ಹೊರತಾಗಿ ಇತರ ಯಾವುದೇ ಪ್ರದೇಶದಲ್ಲಿರುವ ಶಾಲೆಯಲ್ಲಿ ವ್ಯಾಸಂಗಮಾಡಿದ ಅಭ್ಯರ್ಥಿಯಾಗಿರಬೇಕು;

3) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು ಕರ್ನಾಟಕ ಅಧಿಸೂಚನೆ ಸಂಖ್ಯೆ.ಸಿಆಸುಇ:08:ಸೆನೆನಿ:2001, ದಿನಾಂಕ 13.02.2001ರ ಪ್ರಕಾರ ಮೇಲೆ ಪರಿಭಾಷಿಸಿದಂತೆ 1ನೇ ತರಗತಿಯಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿಧ್ಯಾಭ್ಯಾಸ ಹೊಂದಿರುವವರು ಸರ್ಕಾರಿ ಆದೇಶ ಸಂಖ್ಯೆ. ಸಿಆಸುಇ/96/ಸೆನೆನಿ/2005, ದಿನಾಂಕ 10.08.2005ರಲ್ಲಿ ನಿಗದಿಪಡಿಸಿದ ನಮೂನೆ-2ರ ಪ್ರಮಾಣಪತ್ರವನ್ನು ಕಡ್ಡಾಯವಾಗಿ ಶಾಲಾ ಮುಖ್ಯೋಪಾಧ್ಯಾಯರಿಂದ ಸಹಿ ಮಾಡಿಸಿ ಮತ್ತು ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿದ ಪ್ರಮಾಣ ಪತ್ರವನ್ನು ಪಡೆಯುವುದು. ನಮೂನೆ-1 (ನಾನ್-ಕ್ರೀಮಿ ಲೇಯರ್) **(ಅನುಬಂಧ-4)** ಮತ್ತು ನಮೂನೆ-2**(ಅನುಬಂಧ-5)** ಇವುಗಳು ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ಅಭ್ಯರ್ಥಿಗಳಿಗೆ ಕಡ್ಡಾಯವಾಗಿರುತ್ತದೆ.

4) ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಸೇರಿದ ಅಭ್ಯರ್ಥಿಗಳು ನಮೂನೆ-2ರಲ್ಲಿ **(ಅನುಬಂಧ-5)** ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರತಕ್ಕದ್ದು.

**ಸೂಚನೆ:-** ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹ ಅಭ್ಯರ್ಥಿಗಳು Non-Creamy Layer ಪ್ರಮಾಣಪತ್ರವನ್ನು ಹೊಂದಿರದಿದ್ದಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

**18)** **ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ:**

ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ / ವಿಯೋಜನೆ ಹೊಂದಿದ ಬಗೆಗಿನ ಪ್ರಮಾಣ ಪತ್ರ / ನಿರಾಕ್ಷೇಪಣಾ ಪ್ರಮಾಣಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 9(1) ರನ್ವಯ ಕೇಂದ್ರ ಸಶಸ್ತ್ರದಳದಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು(ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಮಾಜಿ ಸೈನಿಕ ಮಕ್ಕಳಿಗೆ ವಯೋಮಿತಿ ಸಡಿಲಿಕೆ, ಸಹಿಷ್ಣುತೆ ಪರೀಕ್ಷೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಯಾವುದೇ ತರಹದ ವಿನಾಯಿತಿಯನ್ನು ನೀಡಲಾಗುವುದಿಲ್ಲ. ಕರ್ತವ್ಯ ನಿರ್ವಹಿಸುತ್ತಿದ್ದ ಕೇಂದ್ರ ಸಶಸ್ತ್ರದಳದ ಅಧಿಕಾರಿಗಳಿಂದ ಅವಲಂಭಿತ ಪ್ರಮಾಣ ಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪ್ರಮಾಣ ಪತ್ರವನ್ನು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: 15.02.2019 ರೊಳಗಾಗಿ ಪಡೆದಿರತಕ್ಕದ್ದು.

**19)** **ಅನುಚ್ಛೇದ 371(ಜೆ)ರನ್ವಯ ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ:**

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು, 2013ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು **ಅನುಬಂಧ-6ರಲ್ಲಿ** ಸೂಚಿಸಿರುವ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪವಿಭಾಗದ ಸಹಾಯಕ ಆಯುಕ್ತರಿಂದ

ಸಹಿ ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿರತಕ್ಕದ್ದು. ಈ ಪ್ರಮಾಣ ಪತ್ರದ ನಮೂನೆಯನ್ನು **ಅನುಬಂಧ–6**ರಲ್ಲಿ ತೋರಿಸಲಾಗಿದೆ. ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಯಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು.

**20)** **ಪ್ರಮುಖವಾದ ಸೂಚನೆಗಳು :**

ಅಭ್ಯರ್ಥಿಗಳು ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಕೂಡದು. ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

1) ವಿದ್ಯಾರ್ಹತೆಯ ಅಂಕಪಟ್ಟಿ
2) ಹುಟ್ಟಿದ ದಿನಾಂಕದ ಪ್ರಮಾಣ ಪತ್ರ (ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪ್ರಮಾಣ ಪತ್ರ)
3) ಸರ್ಕಾರಿ ಇಲಾಖೆಯಲ್ಲಿ/ರಾಜ್ಯ ಸರ್ಕಾರ/ಕೇಂದ್ರ ಸರ್ಕಾರ/ಸರ್ಕಾರದ ಯಾವುದೇ ಪ್ರಾಧಿಕಾರದಲ್ಲಿ/ ರಾಜ್ಯ ಅಥವಾ ಕೇಂದ್ರ ಸರ್ಕಾರದ ಸಾರ್ವಜನಿಕ ಸ್ವಾಮ್ಯದ ಕಂಪನಿಗಳಲ್ಲಿ ಪ್ರಸ್ತುತ ಉದ್ಯೋಗಿಯಾಗಿದ್ದಲ್ಲಿ ಅಂತಹವರು ಇಲಾಖಾವತಿಯಿಂದ ಕರ್ತವ್ಯದಿಂದ ಬಿಡುಗಡೆ ಮಾಡುವ ಬಗ್ಗೆ ಇಚ್ಛಾ ಅನುಮತಿ ಪತ್ರ.
4) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು.
5) ಸೈನಿಕ ಸೇವೆಯಿಂದ ಬಿಡುಗಡೆಯಾದ/ವಿಯೋಜನೆ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸ ಕೋರಿದ್ದಲ್ಲಿ).
6) ಮಾಜಿ ಸೈನಿಕ ಮಕ್ಕಳು ಮೀಸಲಾತಿ ಪಡೆಯುವ ಅಭ್ಯರ್ಥಿಗಳು ಅವರ ತಂದೆಯವರು ಕರ್ತವ್ಯ ನಿರ್ವಹಿಸುತ್ತಿದ್ದ ಕೇಂದ್ರ ಸಶಸ್ತ್ರದಳದ ಅಧಿಕಾರಿಗಳಿಂದ ಅವಲಂಬಿತ ಪ್ರಮಾಣ ಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
7) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು.
8) ಹೈದರಾಬಾದ್–ಕರ್ನಾಟಕ ಮೀಸಲಾತಿ ಬಯಸಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅರ್ಹತಾ ಪ್ರಮಾಣಪತ್ರವನ್ನು ಅಸಿಸ್ಟೆಂಟ್ ಕಮೀಷನರ್‌ರವರಿಂದ ಅಧಿಸೂಚನೆ ಕೊನೆಯಲ್ಲಿ ನೀಡಲಾಗಿರುವ ಅನುಬಂಧ–6ರ ಮಾದರಿಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು.

**20.1)** **ಟಿಪ್ಪಣಿ:–**

1) ಈ ಮೇಲೆ ನಮೂದಿಸಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿದೆ.
2) ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದರಿಂದ ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಲು ಅವಕಾಶ ಇರುವುದಿಲ್ಲ, ಆದರೆ ಈ ಮೇಲಿನ ಪ್ರಮಾಣ ಪತ್ರಗಳನ್ನು / ದಾಖಲೆಗಳನ್ನು ಹಾಗೂ ನೇಮಕಾತಿ ಸಮಿತಿಯು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು.
3) ಅಭ್ಯರ್ಥಿಯು ಅರ್ಜಿಯಲ್ಲಿ ಭರ್ತಿ ಮಾಡಿದ ಮಾಹಿತಿಯು ಅಂತಿಮವಾಗಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಅರ್ಜಿಯ ಎಲ್ಲಾ ಕಾಲಂಗಳನ್ನು ಸರಿಯಾಗಿ ಭರ್ತಿ ಮಾಡತಕ್ಕದ್ದು.
4) ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ವಿಳಾಸ ಬದಲಾವಣೆಯಾಗಿದ್ದಲ್ಲಿ ತಕ್ಷಣವೇ ಅಭ್ಯರ್ಥಿಗಳು ಲಿಖಿತವಾಗಿ ಸಂಬಂಧಪಟ್ಟ ನೇಮಕಾತಿ ಸಮಿತಿಯ ಗಮನಕ್ಕೆ ತರತಕ್ಕದ್ದು. ವಿಳಾಸ ಬದಲಾವಣೆಯನ್ನು ಪರಿಗಣಿಸಲು ನೇಮಕಾತಿ ಸಮಿತಿಯು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ನೇಮಕಾತಿ ಸಮಿತಿಯು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು.
5) ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಯಾವುದೇ ಸುಳ್ಳು/ತಪ್ಪು ಮಾಹಿತಿಗಳನ್ನು ನೀಡಬಾರದು.ಹಾಗೇ ನೀಡಿ ತದನಂತರ ನೇಮಕಾತಿ ಸಮಿತಿಗೆ ಅದು ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದು ಪಡಿಸಲಾಗುವುದು.

**21) ವಿಶೇಷ ಸೂಚನೆಗಳು :**

ಅಭ್ಯರ್ಥಿಗಳು ನೇಮಕಾತಿ ಸಮಿತಿಯು ನಿಗದಿಪಡಿಸಿದ ಅರ್ಜಿ ನಮೂನೆಯಲ್ಲಿಯೇ ಎಲ್ಲಾ ಅಂಕಣಗಳನ್ನು ಸ್ಪಷ್ಟವಾಗಿ ಭರ್ತಿ ಮಾಡತಕ್ಕದ್ದು. ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸುವ, ಶುಲ್ಕ ಪಾವತಿಸದೇ ಸಲ್ಲಿಸಲ್ಪಡುವ, ಅಪೂರ್ಣವಾದ, ಸಹಿ ಮಾಡದ ಹಾಗೂ ಭಾವಚಿತ್ರ ಇಲ್ಲದೆ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಹಾಗೂ ಈ ಕೆಳಕಂಡ ವಿಶೇಷ ಸೂಚನೆಗಳನ್ನು ಗಮನಿಸುವುದು.

1. ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.
2. ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಕಾಲಂನ್ನು ತುಂಬತಕ್ಕದ್ದು ಹಾಗೂ ಅವರ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣ ಪ್ರಮಾಣ ಪತ್ರವನ್ನು (No Objection Certificate) ಸಂಬಂಧಿತ ಇಲಾಖಾ ಮುಖ್ಯಸ್ಥರಿಂದ ಪಡೆದು ನೇಮಕಾತಿ ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.
3. ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಬಾರದು. ಏಕೆಂದರೆ ಒಂದಕ್ಕಿಂತ ಹೆಚ್ಚು ನೊಂದಣಿ ಸಂಖ್ಯೆಯಲ್ಲಿ ಪರೀಕ್ಷೆಗೆ ಹಾಜರಾಗಿದ್ದು ಯಾವುದೇ ಹಂತದಲ್ಲಿ ಕಂಡುಬಂದಲ್ಲಿ ಅಂತಹ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು.ಸಂಕ್ಷಿಪ್ತವಾಗಿ ತಿಳಿಸುವುದೆಂದರೆ ಒಬ್ಬ ಅಭ್ಯರ್ಥಿಯು ಒಂದು ನೊಂದಣಿ ಸಂಖ್ಯೆಗಿಂತ ಹೆಚ್ಚು ನೋಂದಣಿ ಸಂಖ್ಯೆಯನ್ನು ಪರೀಕ್ಷೆಯ ಯಾವುದೇ ಹಂತದಲ್ಲಿ ಬಳಸುವುದನ್ನು ನಿಖರವಾಗಿ ನಿಷೇಧಿಸಲಾಗಿದೆ.ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಒಂದೇಹೆಸರಿನಲ್ಲಿ ಸಲ್ಲಿಸಿ ಬೇರೆ ಬೇರೆ ಫೋಟೋಗಳನ್ನು ಅಂಟಿಸಿ, ಸಹಿಗಳನ್ನು ಮಾಡಿ ಪರೀಕ್ಷೆಗೆ ಹಾಜರಾಗಿದ್ದು ಕಂಡುಬಂದಲ್ಲಿ ಅಂತಹವರ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸುವುದಲ್ಲದೇ ಅವರ ಮೇಲೆ ಕಾನೂನಿನ ರೀತ್ಯಾ ಕ್ರಮವನ್ನು ಕೈಗೊಳ್ಳಲಾಗುವುದು.ಈ ವಿಚಾರದಲ್ಲಿ ನೇಮಕಾತಿ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.
4. ಅರ್ಹ ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನಾ ಸಂದರ್ಭದಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿಗಳಿಗೆ ಪೂರಕವಾಗಿ ಸದರಿ ದಾಖಲೆ / ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸಬೇಕು, ತಪ್ಪಿದಲ್ಲಿ ಅಂತಹ ಮೀಸಲಾತಿಯನ್ನು ರದ್ದುಪಡಿಸಿ, ಸಾಮಾನ್ಯ ವರ್ಗದಡಿಯಲ್ಲಿ ಅರ್ಹತೆ ಹೊಂದಿದಲ್ಲಿ ಪರಿಗಣಿಸಲಾಗುವುದು. **ಅರ್ಜಿಯೊಂದಿಗೆ ಯಾವುದೇ ಮೂಲ ಪ್ರಮಾಣ ಪತ್ರಗಳನ್ನು ಹಾಗೂ ಪ್ರತಿಗಳನ್ನು ಸಲ್ಲಿಸುವ ಅಗತ್ಯವಿರುವುದಿಲ್ಲ.** ಒಂದು ವೇಳೆ ಸಲ್ಲಿಸಿ, ಅವು ಕಳೆದು ಹೋದರೆ ನೇಮಕಾತಿ ಸಮಿತಿಯು ಜವಾಬ್ದಾರಿಯಾಗುವುದಿಲ್ಲ.
5. ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಅಂದರೆ 15.02.2019 ಕ್ಕೆ ಮೊದಲು ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿದ ಶೈಕ್ಷಣಿಕ ವಿಧ್ಯಾರ್ಹತೆಯನ್ನು ಹೊಂದಿರಬೇಕು.
6. ಅಭ್ಯರ್ಥಿಗಳು ಅರ್ಜಿಯಲ್ಲಿ ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅದಕ್ಕೆ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ. ಅರ್ಜಿಯಲ್ಲಿನ ವಿವರಗಳು ಸರಿಯಾಗಿವೆಯೇ ಎಂದು ಮನಗಂಡು ಆ ನಂತರ ಮೂಲ ಅರ್ಜಿಯನ್ನು ಭರ್ತಿ ಮಾಡುವುದು ಸೂಕ್ತ.
7. ಒಂದು ವೇಳೆ ಅಭ್ಯರ್ಥಿಗಳು ಶೈಕ್ಷಣಿಕ ವಿಧ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳನ್ನು ಸರಿಯಾಗಿ ನಮೂದಿಸದೆ ಇದ್ದಲ್ಲಿ ಅಥವಾ ತಪ್ಪಾಗಿ ನಮೂದಿಸಿದಲ್ಲಿ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು.
8. ಒಂದು ವೇಳೆ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ/ಬಂದ್ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನದಂದು ಅರ್ಜಿಗಳನ್ನು ಸ್ವೀಕರಿಸಲಾಗುವುದು. ಆದರೆ ವಯೋಮಿತಿ ಹಾಗೂ ಕನಿಷ್ಠ ಶೈಕ್ಷಣಿಕ ವಿಧ್ಯಾರ್ಹತೆಯ ಪರಿಗಣನೆಗೆ ದಿನಾಂಕ: 15.02.2019 ಮಾತ್ರ ಅನ್ವಯವಾಗುತ್ತದೆ.
9. ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಸದರಿ ಅರ್ಜಿ ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.
10. ಅರ್ಜಿ ತುಂಬುವ ವಿಧಾನ ಹಾಗೂ ಹೆಚ್ಚಿನ ವಿವರಗಳು ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in or www.karnataka.gov.in/hgcd ನಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ.

11. ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನೀಡುವ ಮಾಹಿತಿಗಳು ಸರಿ ಇದೆ ಎಂದು ಭಾವಿಸಿ ಅವರುಗಳು ಸ್ಪರ್ಧಾತ್ಮಕ ಪರೀಕ್ಷೆಯನ್ನು ಬರೆಯಲು ಅರ್ಹರೆ ಎಂಬುದನ್ನು ಪರಿಗಣಿಸಿ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶ ಪತ್ರಗಳನ್ನು ತಯಾರು (Upload) ಮಾಡಲಾಗುತ್ತದೆ. ಆದ್ದರಿಂದ ನಿಗದಿಪಡಿಸಿರುವವಯೋಮಿತಿ, ವಿಧ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಪೂರ್ಣ ಮಾಹಿತಿ ನೀಡದ ಅಥವಾ ತಪ್ಪು ಮಾಹಿತಿ ನೀಡಿದ, ಶುಲ್ಕ ಪಾವತಿಸದ, ಅಭ್ಯರ್ಥಿಯ ಸಹಿ ಇಲ್ಲದ ಮತ್ತು ಭಾವಚಿತ್ರ ಇಲ್ಲದೆ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
12. ಕರ್ನಾಟಕ ರಾಜ್ಯದ, ಕೇಂದ್ರ ಸರ್ಕಾರದ ಯಾವುದೇ ಸರ್ಕಾರಿ ಹಾಗೂ ಅರೆ ಸರ್ಕಾರಿ ಸಂಸ್ಥೆಯ ಸೇವೆಯಿಂದ ವಜಾ ಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.
13. ಪರೀಕ್ಷೆಗೆ ಪ್ರವೇಶ ಪತ್ರವು ಸಂಪೂರ್ಣವಾಗಿ ತಾತ್ಕಾಲಿಕವಾಗಿರುತ್ತದೆ. ಪ್ರವೇಶ ಪತ್ರ ನೀಡಿದ ಮಾತ್ರಕ್ಕೆ ನೇಮಕಾತಿ ಸಮಿತಿಯು ನಿಮ್ಮ ಅಭ್ಯರ್ಥಿತನವನ್ನು ಅಂಗೀಕರಿಸಿದೆ ಎಂದು ಭಾವಿಸತಕ್ಕದ್ದಲ್ಲ.
14. ಸುಳ್ಳು ಮಾಹಿತಿ ಅಥವಾ ನಕಲಿ ಪ್ರಮಾಣ ಪತ್ರ/ದಾಖಲಾಲೆಗಳನ್ನು ಸಲ್ಲಿಸಿ ನೌಕರಿ ಪಡೆಯುವುದು/ಪಡೆದಿರುವುದು ಯಾವುದೇ ಸಂದರ್ಭದಲ್ಲಿ ಕಂಡು ಬಂದಲ್ಲಿ, ಅದೇ ಹಂತದಲ್ಲಿ ಅವರನ್ನು ಯಾವುದೇ ಮುನ್ಸೂಚನೆ ನೀಡದೆ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸುವುದರ ಜೊತೆಗೆ ಅವರ ವಿರುದ್ದ ಕಾನೂನು ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು.
15. ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ನಿಬಂಧನೆಗಳಿಗೆ (Rules & Regulations) ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.
16. ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮಗಳು, 1977ರಲ್ಲಿ ನಿರ್ದಿಷ್ಟಗೊಳಿಸಿರುವಂತೆ ಆಯ್ಕೆಯಾದ ಅಭ್ಯರ್ಥಿಯು ನೇಮಕಾತಿ ಆದೇಶ ನೀಡುವ ಮುನ್ನ ಪೂರ್ಣ ಪ್ರಮಾಣದ ವೈದ್ಯಕೀಯ ಪರೀಕ್ಷೆಗೆ ಒಳಗಾಗಬೇಕಾಗುತ್ತದೆ. ನಿಯಮದಲ್ಲಿ ನಿಗದಿಪಡಿಸಿರುವ ವೈದ್ಯಕೀಯ ಪರೀಕ್ಷೆಯಲ್ಲಿ ವಿಫಲರಾದ ಅಭ್ಯರ್ಥಿಗಳನ್ನು ಅನರ್ಹಗೊಳಿಸಲಾಗುವುದು.
17. ಪ್ರಶ್ನೆ ಪತ್ರಿಕೆಯಲ್ಲಿ ಯಾವುದಾದರೂ ಮುದ್ರಣ ದೋಷವಾಗಿದ್ದಲ್ಲಿ ಅದನ್ನು ತಕ್ಷಣ ಕೊಠಡಿಯ ಪರಿವೀಕ್ಷಕರ ಗಮನಕ್ಕೆ ತಂದು ಸರಿಯಾದ ಪ್ರಶ್ನೆ ಪತ್ರಿಕೆ ಪಡೆದುಕೊಂಡು ಉತ್ತರವನ್ನು ಬರೆಯಬೇಕು ಇದರ ಬಗ್ಗೆ ಪರೀಕ್ಷೆ ಮುಗಿದ ನಂತರ ನೇಮಕಾತಿ ಸಮಿತಿಗೆ ಸದರಿ ವಿಷಯದ ಬಗ್ಗೆ ತಿಳಿಸಿದಲ್ಲಿ ಅದನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ.
18. ಪರೀಕ್ಷೆ ಮುಗಿದ ಒಂದು ಅಥವಾ ಎರಡು ದಿನಗಳ ನಂತರ ಕೀ ಉತ್ತರಗಳನ್ನು ವೆಬ್‌ಸೈಟ್‌ನಲ್ಲಿ ಹಾಗೂ ಗೃಹರಕ್ಷಕ ಹಾಗೂ ಪೌರರಕ್ಷಣಾ ಕೇಂದ್ರ ಕಚೇರಿ, ನಂ.1, ಎ.ಎಂ.ರಸ್ತೆ, ಬೆಂಗಳೂರು42 ರ ಸೂಚನಾ ಫಲಕದಲ್ಲಿ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಉತ್ತರಗಳ ಬಗ್ಗೆ ಏನಾದರೂ ಆಕ್ಷೇಪಣೆಗಳು ಇದ್ದಲ್ಲಿ ಅದಕ್ಕೆ ಒಂದು ವಾರದ ಕಾಲಾವಕಾಶವನ್ನು ನೀಡಲಾಗುವುದು. ಆಕ್ಷೇಪಣೆಗಳು ಬಂದ ನಂತರ ಅದನ್ನು ಒಂದು ತಜ್ಞರ ಸಮಿತಿಗೆ ನೀಡಿ ಅವರಿಂದ ಸರಿಯಾದ ಉತ್ತರಗಳನ್ನು ಪಡೆದು ಅಂತಿಮ ಕೀ ಉತ್ತರಗಳನ್ನು ಪ್ರಕಟಿಸಲಾಗುವುದು ಮತ್ತು ಈ ಅಂತಿಮ ಕೀ ಉತ್ತರಗಳ ಪ್ರಕಾರ ಉತ್ತರ ಪತ್ರಿಕೆಯನ್ನು ಮೌಲ್ಯಮಾಪನ ಮಾಡಲಾಗುವುದು.

**22) ದುರ್ನಡತೆ:**

ಒಬ್ಬ ಅಭ್ಯರ್ಥಿ ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ನಡತೆ ಎಸಗಿದ್ದಲ್ಲಿ, ತಪ್ಪಿತಸ್ಥನೆಂದು ಕಂಡುಬಂದಲ್ಲಿ ಹಾಗೂ ನೇಮಕಾತಿ ಸಮಿತಿಯಿಂದ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ

ಒಳಪಡುವುದಲ್ಲದೇ, ನೇಮಕಾತಿ ಸಮಿತಿ ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

**23) ಸಹಾಯವಾಣಿ:**

ಅಭ್ಯರ್ಥಿಗಳು **ಬೋಧಕ ಹಾಗೂ ಸಹಾಯಕ ಬೋಧಕ** ಹುದ್ದೆಯ ನೇಮಕಾತಿಗೆ ಸಂಬಂಧಿಸಿದಂತೆ ಸಹಾಯವಾಣಿಗೆ ಸಂಪರ್ಕಿಸಿ ತಮ್ಮ ನೇಮಕಾತಿಗೆ ಸಂಬಂಧಿಸಿದ ಸಂದೇಹಗಳನ್ನು ಸ್ಪಷ್ಟಪಡಿಸಿಕೊಳ್ಳಬಹುದು. ಘಟಕದ ಸಹಾಯವಾಣಿಯ ಸಂಖ್ಯೆಗಳು ಈ ಕೆಳಕಂಡಂತಿರುತ್ತದೆ. ಈ ಸಹಾಯ ವಾಣಿ ದಿನಾಂಕ 28.01.2019 ರಿಂದ ಪ್ರತಿದಿನ ಬೆಳಿಗ್ಗೆ 9–00 ರಿಂದ ಸಾಯಂಕಾಲ 6–00 ಗಂಟೆಯವರೆಗೆ ಲಭ್ಯವಿರುತ್ತದೆ.

**ಸಹಾಯವಾಣಿ ಸಂಖ್ಯೆಗಳು:** 25553234 / 22943346

ನೇಮಕಾತಿ ಘಟಕ:– ಬೆಂಗಳೂರು

ಇಮೇಲ್ ಐಡಿ : hgcdhqrsban@gmail.com / ssrnt@ksp.gov.in

**ಸಹಿ/–**
**ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು,**
**ನೇಮಕಾತಿ, ಬೆಂಗಳೂರು.**

**ಅನುಬಂಧ–'ಅ'**

**ಬೋಧಕರ ಹುದ್ದೆ –22 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ.**

ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಇದನ್ನು ಬದಲಾವಣೆ ಮಾಡಿಕೊಳ್ಳಬಹುದಾಗಿದೆ.

**ಉಳಿದ ಮೂಲ ವೃಂದ–** 22 ಹುದ್ದೆಗಳು = ರೋಸ್ಟರ್ ಬಿಂದು 1ನೇ ಸೈಕಲ್‌ನಿಂದ ಪ್ರಾರಂಭವಾಗಿ 22ನೇ ಬಿಂದುವಿಗೆ ಮುಕ್ತಾಯಗೊಂಡಿದೆ.

| ಕ್ರ. ಸಂ | ವರ್ಗ | ಒಟ್ಟು | ಗ್ರಾಮೀಣ | ಮಾ.ಸೈ | ಕನ್ನಡ ಮಾಧ್ಯಮ | ಯೋಜನೆ ನಿರಾಶ್ರಿತ | ಮಹಿಳಾ | ಇತರರು |
|---|---|---|---|---|---|---|---|---|
| 1 | ಸಾಮಾನ್ಯ ವರ್ಗ | 11 | 03 | 01 | – | – | 03 | 04 |
| 2 | ಪರಿಶಿಷ್ಟ ಜಾತಿ | 03 | 01 | – | – | – | 01 | 01 |
| 3 | ಪರಿಶಿಷ್ಟ ಪಂಗಡ | 01 | – | – | – | – | – | 01 |
| 4 | ಪ್ರವರ್ಗ – I | 01 | – | – | – | – | – | 01 |
| 5 | ಪ್ರವರ್ಗ– 2 ಎ | 03 | 01 | – | – | – | 01 | 01 |
| 6 | ಪ್ರವರ್ಗ– 2 ಬಿ | 01 | – | – | – | – | – | 01 |
| 7 | ಪ್ರವರ್ಗ– 3 ಎ | 01 | – | – | – | – | – | 01 |
| 8 | ಪ್ರವರ್ಗ– 3 ಬಿ | 01 | – | – | – | – | – | 01 |
| | **ಒಟ್ಟು:** | **22** | **05** | **01** | – | – | 05 | **11** |

**ಹೈದ್ರಾಬಾದ್–ಕರ್ನಾಟಕ ವ್ಯಾಪ್ತಿಯ ಸ್ಥಳೀಯ ವೃಂದ**

ರಾಜ್ಯವ್ಯಾಪ್ತಿ ಸ್ಥಳೀಯ ವೃಂದ (ಸ್ಥಳೀಯ ವೃಂದ 80% + ರಾಜ್ಯ ಮಟ್ಟದ ಸ್ಥಳೀಯ ವೃಂದ 8%) ಖಾಲಿ ಹುದ್ದೆಗಳು.

ಬೋಧಕರ ಹುದ್ದೆ –4 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ:

**ರಾಜ್ಯವ್ಯಾಪ್ತಿ ಸ್ಥಳೀಯ ವೃಂದ** – 04 ಹುದ್ದೆಗಳು = ರೋಸ್ಟರ್ ಬಿಂದು 1ನೇ ಸೈಕಲ್‌ನಿಂದ ಪ್ರಾರಂಭವಾಗಿ 04ನೇ ಬಿಂದುವಿಗೆ ಮುಕ್ತಾಯಗೊಂಡಿದೆ.

| ಕ್ರ. ಸಂ | ವರ್ಗ | ಒಟ್ಟು | ಗ್ರಾಮೀಣ | ಮಾ.ಸೈ | ಕನ್ನಡ ಮಾಧ್ಯಮ | ಯೋಜನೆ ನಿರಾಶ್ರಿತ | ಮಹಿಳಾ | ಇತರರು |
|---|---|---|---|---|---|---|---|---|
| 1 | ಸಾಮಾನ್ಯ ವರ್ಗ | 02 | – | – | – | – | 01 | 01 |
| 2 | ಪರಿಶಿಷ್ಟ ಜಾತಿ | 01 | – | – | – | – | – | 01 |
| 3 | ಪರಿಶಿಷ್ಟ ಪಂಗಡ | 01 | – | – | – | – | – | 01 |
| 4 | ಪ್ರವರ್ಗ – I | – | – | – | – | – | – | – |
| 5 | ಪ್ರವರ್ಗ– 2 ಎ | – | – | – | – | – | – | – |
| 6 | ಪ್ರವರ್ಗ– 2 ಬಿ | – | – | – | – | – | – | – |
| 7 | ಪ್ರವರ್ಗ– 3 ಎ | – | – | – | – | – | – | – |
| 8 | ಪ್ರವರ್ಗ– 3 ಬಿ | – | – | – | – | – | – | – |
| | **ಒಟ್ಟು:** | **04** | – | – | – | – | 01 | **03** |

**ಟಿಪ್ಪಣಿ:–ಮಾಜಿ ಸೈನಿಕರು, ಗ್ರಾಮೀಣ ಅಭ್ಯರ್ಥಿಗಳು ಲಭ್ಯವಿಲ್ಲದಿದಲ್ಲಿ ಅಂತಹ ಖಾಲಿ ಹುದ್ದೆಗಳ್ನು ಮೇಲೆ ನಮೂದಿಸಿದ ಆಯಾ ಪ್ರವರ್ಗದ ಇತರ ಅಭ್ಯರ್ಥಿಗಳಿಂದ ತುಂಬಲಾಗುವುದು.**

**ಅನುಬಂಧ–'ಆ'**

**ಸಹಾಯಕ ಬೋಧಕ ಹುದ್ದೆ – 14 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ**

ಉಳಿದ ಮೂಲ ವೃಂದಕ್ಕೆ ಒಳಪಡುವ ಖಾಲಿ ಹುದ್ದೆಗಳು.

**ಉಳಿದ ಮೂಲ ವೃಂದ**– 14 ಹುದ್ದೆಗಳು = ರೋಸ್ಟರ್ ಬಿಂದು 1ನೇ ಸೈಕಲ್‌ನಿಂದ ಪ್ರಾರಂಭವಾಗಿ 14ನೇ ಬಿಂದುವಿಗೆ ಮುಕ್ತಾಯಗೊಂಡಿದೆ.

| ಕ್ರ. ಸಂ | ವರ್ಗ | ಒಟ್ಟು | ಗ್ರಾಮೀಣ | ಮಾ.ಸೈ | ಕನ್ನಡ ಮಾಧ್ಯಮ | ಯೋಜನೆ ನಿರಾಶ್ರಿತ | ಮಹಿಳಾ | ಇತರರು |
|---|---|---|---|---|---|---|---|---|
| 1 | ಸಾಮಾನ್ಯ ವರ್ಗ | 07 | 02 | – | – | – | 02 | 03 |
| 2 | ಪರಿಶಿಷ್ಟ ಜಾತಿ | 02 | – | – | – | – | 01 | 01 |
| 3 | ಪರಿಶಿಷ್ಟ ಪಂಗಡ | 01 | – | – | – | – | – | 01 |
| 4 | ಪ್ರವರ್ಗ – I | 01 | – | – | – | – | – | 01 |
| 5 | ಪ್ರವರ್ಗ– 2 ಎ | 02 | – | – | – | – | 01 | 01 |
| 6 | ಪ್ರವರ್ಗ– 2 ಬಿ | 01 | – | – | – | – | – | 01 |
| 7 | ಪ್ರವರ್ಗ– 3 ಎ | – | – | – | – | – | – | – |
| 8 | ಪ್ರವರ್ಗ– 3 ಬಿ | – | – | – | – | – | – | – |
| | **ಒಟ್ಟು:** | **14** | **02** | – | – | – | 04 | **08** |

**ಹೈದ್ರಾಬಾದ್–ಕರ್ನಾಟಕ ವ್ಯಾಪ್ತಿಯ ಸ್ಥಳೀಯ ವೃಂದ**

ಹೈದ್ರಾಬಾದ್–ಕರ್ನಾಟಕ ಸ್ಥಳೀಯ ವೃಂದ (ಸ್ಥಳೀಯ ವೃಂದ 80%) ಖಾಲಿ ಹುದ್ದೆಗಳು.

ಸಹಾಯಕ ಬೋಧಕ ಹುದ್ದೆ – 02 ಖಾಲಿ ಹುದ್ದೆಗಳ ವರ್ಗೀಕರಣ ಈ ಕೆಳಗಿನಂತಿದೆ

**ಹೈದ್ರಾಬಾದ್–ಕರ್ನಾಟಕ ಸ್ಥಳೀಯ ವೃಂದ**– 02 ಹುದ್ದೆಗಳು = ರೋಸ್ಟರ್ ಬಿಂದು 1 ನೇ ಸೈಕಲ್‌ನಿಂದ ಪ್ರಾರಂಭವಾಗಿ 02ನೇ ಬಿಂದುವಿಗೆ ಮುಕ್ತಾಯಗೊಂಡಿದೆ.

| ಕ್ರ. ಸಂ | ವರ್ಗ | ಒಟ್ಟು | ಗ್ರಾಮೀಣ | ಮಾ.ಸೈ | ಕನ್ನಡ ಮಾಧ್ಯಮ | ಯೋಜನೆ ನಿರಾಶ್ರಿತ | ಮಹಿಳಾ | ಇತರರು |
|---|---|---|---|---|---|---|---|---|
| 1 | ಸಾಮಾನ್ಯ ವರ್ಗ | 01 | – | – | – | – | – | 01 |
| 2 | ಪರಿಶಿಷ್ಟ ಜಾತಿ | 01 | – | – | – | – | – | 01 |
| 3 | ಪರಿಶಿಷ್ಟ ಪಂಗಡ | – | – | – | – | – | – | – |
| 4 | ಪ್ರವರ್ಗ – I | – | – | – | – | – | – | – |
| 5 | ಪ್ರವರ್ಗ– 2 ಎ | – | – | – | – | – | – | – |
| 6 | ಪ್ರವರ್ಗ– 2 ಬಿ | – | – | – | – | – | – | – |
| 7 | ಪ್ರವರ್ಗ– 3 ಎ | – | – | – | – | – | – | – |
| 8 | ಪ್ರವರ್ಗ– 3 ಬಿ | – | – | – | – | – | – | – |
| | **ಒಟ್ಟು:** | **02** | – | – | – | – | – | **02** |

**ಟಿಪ್ಪಣಿ:–** ಗ್ರಾಮೀಣ ಅಭ್ಯರ್ಥಿಗಳು ಲಭ್ಯವಿಲ್ಲದಿದಲ್ಲಿ ಅಂತಹ ಖಾಲಿ ಹುದ್ದೆಗಳ್ನು ಮೇಲೆ ನಮೂದಿಸಿದ ಆಯಾ ಪ್ರವರ್ಗದ ಇತರ ಅಭ್ಯರ್ಥಿಗಳಿಂದ ತುಂಬಲಾಗುವುದು.

ಸಹಿ/–

**ಸಮಾದೇಷ್ಟರು, ಗೃಹರಕ್ಷಕ ಮತ್ತು**
**ಪೌರರಕ್ಷಣಾ ಅಕಾಡೆಮಿ ಹಾಗೂ ಸದಸ್ಯ ಕಾರ್ಯದರ್ಶಿಗಳು.**

**ಅನುಬಂಧ-1**

**(ಪ.ಜಾ/ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ –ಡಿ**

**(ನಿಯಮ 3ಎ (2) (3) ನೋಡಿ)**

**ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ /ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

**ಪ್ರಮಾಣ ಪತ್ರ**

**.............................................................. ರಾಜ್ಯದ / ಕೇಂದ್ರಾಡಳಿತ ಪ್ರದೇಶದ * .......................... ಜಿಲ್ಲೆಯ/ ವಿಭಾಗದ.................................. ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ .............. ಎಂಬುವವರ ಮಗ / ಮಗಳಾದ ಶ್ರೀ /ಶ್ರೀಮತಿ ............................................ ಇವರು ಅನುಸೂಚಿತ ಜಾತಿ / ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವಜಾತಿ / ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣಿಕರಿಸಲಾಗಿದೆ.**

*** ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950**

*** ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950**

*** ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950**

*** ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951**

**(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅದಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅದಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅದಿನಿಯಮ, 1970 ಮತ್ತುಈಶಾನ್ಯ ಪ್ರದೇಶಗಳ (ಪುನರ್ ರಚನಾ ಅದಿನಿಯಮ, 1971ರ ಮೂಲಕ ತಿದ್ದುಪಡಿಯಾದಂತೆ).**

*** ಸಂವಿಧಾನ**

*** ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956**

*** ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅದಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿದಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.**

*** ಸಂವಿಧಾನ (ದಾದರ್ ಮತ್ತು ನಗರ ಹವೇಲಿ) ಅನುಸೂಚಿತ ಜಾತಿಗಳ ಆದೇಶ, 1962**

*** ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964**

*** ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967**

*** ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ 1988**

*** ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ**

**2. ಶ್ರೀ / ಶ್ರೀಮತಿ / ಕುಮಾರಿ* ................................................................................................ ಮತ್ತು/ ಅಥವಾ ಅವನ* / ಅವಳ* ಕುಟುಂಬವು.............................................................................. ರಾಜ್ಯ / ಕೇಂದ್ರಾಡಳಿತ ಪ್ರದೇಶದ............................................ ಜಿಲ್ಲಾ / ವಿಭಾಗದ .......................... ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)**

**ಸ್ಥಳ:**

**ದಿನಾಂಕ:** ಸಹಿ ..................................................

ತಹಶೀಲ್ದಾರರು ..................................................

ಪದನಾಮಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ*

ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

**ಸೂಚನೆ : ಇಲ್ಲಿ ಉಪಯೋಗಿಸಿದ "ಸಾಮಾನ್ಯ ನಿವಾಸಿಗಳೂ" ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.**

**ಭಾರತ ಸರ್ಕಾರದ ಪತ್ರ ಸಂಖ್ಯೆ. ಬಿಸಿ 12028 / 2/ 76–ಎಸ್‌ಸಿಟಿ–1 ಗೃಹ ಮಂತ್ರಾಲಯದ ಅನುಸಾರವಾಗಿ, ಅಂಥ ಪ್ರಮಾಣಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ13.02.74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ 5ನೇ ಆಗಸ್ಟ್ 1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದುತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.**

**ಅನುಬಂಧ–2**

**(ಪ್ರವರ್ಗ –1ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ –ಇ**

(ನಿಯಮ 3ಎ (2) (3) ನೋಡಿ)

**ಹಿಂದುಳಿದ ವರ್ಗಗಳಿಗೆ (ಪ್ರ.ವರ್ಗ–1) ಸೇರಿದ ಅಭ್ಯರ್ಥಿಗೆ ನೀಡುವ ಪ್ರಮಾಣ ಪತ್ರ**

........................................................................................................ ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ /ಶ್ರೀಮತಿ ........................................................................................................ ಇವರ ಮಗ / ಮಗಳು / ಪತ್ನಿ /ಪತಿಯಾದ ಶ್ರೀ / ಶ್ರೀಮತಿ........................................................................................ ಇವರು ಹಿಂದುಳಿದ ವರ್ಗಗಳ(ಪ್ರವರ್ಗ) ........................................................... ಜಾತಿಯ ....................................... ಉಪ ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು
ದಿನಾಂಕ : ........................... ತಾಲ್ಲೂಕು
ಕಛೇರಿಯ ಮೊಹರು

**ಅನುಬಂಧ–3**

**(ಪ್ರವರ್ಗ –2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ –ಎಫ್**

(ನಿಯಮ 3ಎ (2) (3)ನ್ನು ನೋಡಿ)

**ಹಿಂದುಳಿದ ವರ್ಗಗಳಿಗೆ (2ಎ, 2ಬಿ, 3ಎ, 3ಬಿ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ**

.......................................................... ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ............................................. ಇವರ ಮಗ /ಮಗಳು / ಪತಿ / ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ ...................................... ಇವರು ಮತ್ತು ಆತನ / ಅವಳ ತಂದೆ / ತಾಯಿ /ಪೋಷಕರು/ಪತ್ನಿ/ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರಿಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು ;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ/ಪೋಷಕರಾಗಲಿ· / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು ;

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ .43100–83900/– ಪ್ರಾರಂಬಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು

ಅಥವಾ

ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯ ಆದಾಯವು 8 ಲಕ್ಷ ಮೀರುವುದಿಲ್ಲವೆಂದು ; ಅಥವಾ ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯುಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣಿಕರಿಸಲಾಗಿದೆ.

ಶ್ರೀ/ಶ್ರೀಮತಿ/ಕುಮಾರಿ................................ ಇವರು ..................................... ಜಾತಿಗೆ ......................................... ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ.............................. (2ಎ, 2ಬಿ, 3ಎ, 3ಬಿ) ಸೇರಿರುತ್ತಾರೆ.

ಸ್ಥಳ : ತಹಶೀಲ್ದಾರರು
ದಿನಾಂಕ : ........................... ತಾಲ್ಲೂಕು
ಕಛೇರಿಯ ಮೊಹರು

**ಅನುಬಂಧ-4**

**ನಮೂನೆ-1**

**ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ**

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:

ತಹಶೀಲ್ದಾರರು,
..................... ತಾಲ್ಲೂಕು,
..................... ಜಿಲ್ಲೆ.

ಮಾನ್ಯರೆ,

ಶ್ರೀ / ಶ್ರೀಮತಿ ...................................................... ಎಂಬುವವರ ಮಗ/ಮಗಳು/ಪತಿ/ಪತ್ನಿ.............................. ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ/ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ:
(ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
(ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ :
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು
9. ಆದಾಯ ತೆರಿಗೆ ಪಾವತಿದಾರರೇ ?
10. ಸಂಪತ್ತು ತೆರಿಗೆ ಪಾವತಿದಾರರೇ ?
11. ಮಾರಾಟ ತೆರಿಗೆ ಪಾವತಿದಾರರೇ ?

**ಪ್ರಮಾಣೀಕೃತ ಘೋಷಣೆ**

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ : ತಮ್ಮ ವಿಧೇಯ

ದಿನಾಂಕ : (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ : ತಂದೆ/ತಾಯಿ/ಪೋಷಕರ ಸಹಿ

ದಿನಾಂಕ : (ತಂದೆ/ತಾಯಿ ಜೀವಂತವಿಲ್ಲದಿದ್ದರೆ)

(ಹೆಂಡತಿ/ಗಂಡ/ಇವರ ಸಹಿ)

**ಸ್ಥಳೀಯ ಇಬ್ಬರು ಸಾಕ್ಷಿದಾರರು**

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

**ಪರಿಶೀಲನಾ ಪ್ರಮಾಣ ಪತ್ರ**

1. ಶ್ರೀ/ಶ್ರೀಮತಿ............................................................................ ಎಂಬುವವರ ಮಗ/ಮಗಳು/ಪತಿ/ಪತ್ನಿ/ಶ್ರೀ/ ಶ್ರೀಮತಿ/ಕುಮಾರಿ................................ ಎಂಬುವವರು ಕರ್ನಾಟಕ ರಾಜ್ಯದ ................................. ಜಿಲ್ಲೆಯ ವಿಭಾಗ ............................ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ........................................................ ಇವರ ತಂದೆ/ತಾಯಿ/ಪೋಷಕರ ಸರ್ಕಾರಿ ಆದೇಶ ಸಂಖ್ಯೆಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (CreamyLayer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು

ದಿನಾಂಕ : ......................... ತಾಲ್ಲೂಕು

ಕಛೇರಿಯ ಮೊಹರು

**ಸೂಚನೆ–1**: ಇದರಲ್ಲಿ ಉಪಯೋಗಿಸಲಾದ "ಸಾಮಾನ್ಯ ನಿವಾಸಿ" ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

**ಸೂಚನೆ–2**: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94,ಬೆಂಗಳೂರು, ದಿನಾಂಕ 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

**ಅನುಬಂಧ – 5**

**ನಮೂನೆ –2**

**ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ**

ಶ್ರೀ/ಶ್ರೀಮತಿ ..................................................................ರವರ ಮಗ/ಮಗಳು/ಪತ್ನಿ/ಶ್ರೀ/ಶ್ರೀಮತಿ/ಕುಮಾರಿ ................................................ ಜಿಲ್ಲೆ ............................ ತಾಲ್ಲೂಕು ............................... ಗ್ರಾಮದಲ್ಲಿ ..........................ವಾಸವಾಗಿರುವ ಇವರು ಒಂದನೇ ತರಗತಿಯಿಂದ .................................. ತರಗತಿಯವರೆಗೆ ....................................... ಜಿಲ್ಲೆ.................................. ತಾಲ್ಲೂಕು ................................ ಪಟ್ಟಣ ................................................ ಶಾಲೆಯಲ್ಲಿ ವ್ಯಾಸಂಗ ಮಾಡಿ................................. ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವದಿಯಲ್ಲಿ ಕರ್ನಾಟಕದ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅದಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮುಖ್ಯೋಪಾಧ್ಯಾಯರ ಸಹಿ

ದಿನಾಂಕ : ಮತ್ತು ಸಂಸ್ಥೆಯ ಪೂರ್ಣ ವಿಳಾಸವುಳ್ಳ ಮೊಹರು

ಮೇಲುರುಜು

ಕ್ಷೇತ್ರ ಶಿಕ್ಷಣಾದಿಕಾರಿ

**ಅನುಬಂಧ – 6**

**ಹೈದರಾಬಾದ್–ಕರ್ನಾಟಕ ಮೀಸಲಾತಿ ಬಯಸಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರಗಳು:**

**ಅನುಬಂಧ –ಎ**

**ಅರ್ಹತಾ ಪ್ರಮಾಣ ಪತ್ರ**

[ಅನುಚ್ಛೇದ 371 (ಜೆ) ಮೇರೆಗೆ]

(3(3)ನೇ ನಿಯಮ ನೋಡಿ)

[ಪ್ರಮಾಣ ಪತ್ರ ನೀಡಲು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್ –ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು, 2013]

ಶ್ರೀ / ಶ್ರೀಮತಿ ------------------ ರವರು -------------------- ರವರ ಮಗ/ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ ------------------ ಜಿಲ್ಲೆಯ ----------------- ತಾಲ್ಲೂಕಿನ ---------- ---------- ಗ್ರಾಮ / ಪಟ್ಟಣದ ಸ್ಥಳೀಯ ವ್ಯಕ್ತಿಯಾಗಿದ್ದಾರೆ.

ಸ್ಥಳ: -------------------- ಹೆಸರು --------------------

ದಿನಾಂಕ: ------------------ ಅಸಿಸ್ಟೆಂಟ್ ಕಮಿಷ್ನರ್-----------ಉಪವಿಭಾಗ

-----------------ಜಿಲ್ಲೆ